ಸಂಪುಟ : 8 ಸಂಚಿಕೆ : 187 ಪುಟ : 4 ಬೆಲೆ : 3.00 ಮಂಗಳವಾರ ಆಗಸ್ಟ್ 29, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 187 Pages : 4 Price : 3.00 Tuesday August 29, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಡಿ.ದೇವರಾಜ ಅರಸು ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ ಪಾಟೀಲ ಅಭಿಮತ

# ಹಿಂದುಳಿದ ವರ್ಗಗಳ ಧ್ವನಿ ಡಿ.ದೇವರಾಜ ಅರಸು





■ ವಿಜಯಸಾಕ್ಷಿ ಸುದ್ದಿ, ಗದಗ

'ಧ್ವನಿ ಇಲ್ಲದ ಸಮಾಜಕ್ಕೆ ರಾಜಕೀಯ ನಾಯಕತ್ವ ನೀಡಿದರೆ ಪ್ರಜಾಪ್ರಭುತ್ವ ಪ್ರಬುದ್ಧವಾಗುತ್ತದೆ' ಎಂಬ ದೇವರಾಜ ಅರಸು ಅವರ ಆಶಯದಂತೆ ರಾಜ್ಯದಲ್ಲಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಮುನ್ನಡೆಯುತ್ತಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲ ನುಡಿದರು.

> ಹಿಂದುಳಿದ ವರ್ಗಗಳ ಜನರು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದಲ್ಲಿ ಮಾತ್ರ ತಾವು ಹಿಂದುಳಿದ ವರ್ಗದಿಂದ ಮೇಲೆರಲು ಸಾಧ್ಯವಾಗುತ್ತದೆ. ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ವಿದ್ಯಾಬ್ಯಾಸ ಮಾಡಲು ಸರ್ಕಾರದಿಂದ ಪೂರಕ ವಾತಾವರಣ ನಿರ್ಮಾಣ ಮಾಡಲಾಗಿದೆ. ಶೋಷಿತರಿಗೆ ನ್ಯಾಯ ಒದಗಿಸುವ ಕಾರ್ಯ ಸರ್ಕಾರ ಮಾಡುತ್ತಿದ್ದು, ಬಡತನವನ್ನು ಹೋಗಲಾಡಿಸಲು ನಮ್ಮ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳಿಂದ 1 ಕೋಟಿಗೂ ಅಧಿಕ ಕುಟುಂಬಗಳು ಬಡತನ ರೇಖೆಗಿಂತ ಮೇಲೇರಲಿವೆ.
>
> – ಎಚ್.ಕೆ ಪಾಟೀಲ
> ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವರು.

ನಗರದ ಕನಕ ಭವನದಲ್ಲಿ ಸೋಮವಾರ ಜರುಗಿದ ದಿ. ಡಿ.ದೇವರಾಜು ಅರಸು ಅವರ 108ನೇ ಜನ್ಮದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಹುಕಾರರ ಹಿಡಿತದಲ್ಲಿ ಸಮಾಜ ಇರಬಾರದು. ಸ್ವಾಭಿಮಾನದ ಬದುಕು ಪ್ರತಿಯೊಬ್ಬರದಾಗಬೇಕು. ಈ ಸ್ವಾಭಿಮಾನದ ಬದುಕಿಗೆ ಶಿಕ್ಷಣವೇ ಮೂಲ ಮಂತ್ರವಾಗಿದೆ ಎಂಬುದನ್ನು ಅರಿತ ಪ್ರಗತಿಪರ ಸಾಧನೆಗಳ ಸರದಾರ, ಸಾಮಾಜಿಕ ಪರಿವರ್ತನೆಯ ಹರಿಕಾರ, ನಾಡು ಕಂಡ ಧೀಮಂತ ನಾಯಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಎಂದು ▶▶3ನೇ ಪುಟಕ್ಕೆ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರು ನಾಮಕರಣ ಮಾಡಿ ಐವತ್ತು ವರ್ಷಗಳು ಗತಿಸಿದ ಹಿನ್ನೆಲೆಯಲ್ಲಿ ಸರ್ಕಾರದಿಂದ ವರ್ಷಾಚರಣೆ ಮಾಡಲಾಗುತ್ತಿದೆ. ಕರ್ನಾಟಕ ನಾಮಕರಣದ ಈ ಸ್ವರ್ಣಮಹೋತ್ಸವದ ಆಚರಣೆಗೆ ಎಲ್ಲರೂ ಸನ್ನದ್ಧರಾಗುವಂತೆ ಸಚಿವ ಎಚ್.ಕೆ ಪಾಟೀಲ ಕರೆ ನೀಡಿದರು.

ಇದೇ ಸಂದರ್ಭದಲ್ಲಿ 2022–23ನೇ ಸಾಲಿನ ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಸತಿ ಕಾಲೇಜಿನ ವಿದ್ಯಾರ್ಥಿಗಳಿಗೆ, ಎಸ್ಎಸ್ಎಲ್ಸಿ ಹಾಗೂ ಪಿಯುಸಿಯಲ್ಲಿ ಅಧಿಕ ಅಂಕ ಪಡೆದ ವಸತಿ ನಿಲಯಗಳ ವಿದ್ಯಾರ್ಥಿಗಳನ್ನು ಸಚಿವರು, ಗಣ್ಯರು ಸನ್ಮಾನಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಚನ್ನಮ್ಮ ವೃತ್ತದಿಂದ ಮುಳಗುಂದ ನಾಕಾ ಮಾರ್ಗವಾಗಿ ಕನಕ ಭವನದವರೆಗೆ ಡಿ.ದೇವರಾಜ ಅರಸು ಅವರ ಭಾವಚಿತ್ರದ ಮೆರವಣಿಗೆ ಆಯೋಜಿಸಲಾಗಿತ್ತು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮೆರವಣಿಗೆಗೆ ಚಾಲನೆ ನೀಡಿದರು.

## ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಮಂಗಳವಾರ ನೀರು ಪೂರೈಕೆಯಾಗುವ ಸ್ಥಳಗಳ ಮಾಹಿತಿ ಹೀಗಿದೆ.

ವಾರ್ಡ್ ನಂ.1ರ ಕೃಷ್ಣಾ ಟ್ಯೂಷನ್ ಲೈನ್, ಕಲಾಮಂದಿರ ರೋಡ್ ಲೈನ್, ಗೊಡಚಿ ಖಾನಾವಳಿ ಲೈನ್, ಅಕ್ಕನ ಬಳಗ, ಜೆ.ಟಿ ಮಠದ ಲೈನ್, ಅಂಗಡಿಯವರ ಲೈನ್, ಬಂಗಾರ ಶೆಟ್ಟರ ಲೈನ್, ಡೋವಳಿಯವರ ಲೈನ್, ಮಾಳೇಕೊಪ್ಪಮಠದ ನಂದಿ, ಚಳ್ಳಮರದ ಲೈನ್, ತ್ರಿಮೂರ್ತಿ ಲಾಡ್ಜ್ ಲೈನ್, ಮೀನಾಕ್ಷಿ ಭಟ್ಟರ ಲೈನ್, ವಾರ್ಡ್ ನಂ.13, 12ರಲ್ಲಿ ಸಂಜೀವಿನಿ ಆಸ್ಪತ್ರೆ ಲೈನ್, ಭಾಗಮಾರ ಲೈನ್, ಹೊಂಬಳ ಲೈನ್, ಕೊಳಚೆ ಪ್ರದೇಶ ಲೈನ್, ಗರಗರವರ ಲೈನ್, ನಾವಳ್ಳಿವರ ಲೈನ್, ಶ್ಯಾಮ ಕುಲಕರ್ಣಿ ಲೈನ್, 2ನೇ ಕ್ರಾಸ್, ದುರ್ಗಾ ಬೇಕರಿ ಲೈನ್, ನಾಶಿಯಾರ ಲೈನ್, ದ್ಯಾಮನಗೌಡ್ರ ಲೈನ್, ಲೋಕಜ್ಞಾನವರ ಲೈನ್, ಪತ್ರೋಳಿಯವರ ಲೈನ್, ಕರಡಿಯವರ ಲೈನ್, ಭಾಗ–1, ಕಿರೇಸೂರ ಲೈನ್, ಮುಧೋಳ ಲೈನ್, ಮಾಲಿಪಾಟೀಲ ಲೈನ್, ಜೆ.ಟಿ ಕಾಲೇಜ್ ಲೈನ್, ವಾರ್ಡ್ ನಂ.29ರ ಮಸೂತಿ ಭಾಗ–1, 2, ವಾರ್ಡ್ ನಂ.6ರ ಫಣಿಬಂದ ಲೈನ್, ನಾವಳ್ಳಿ ಲೈನ್, ತಟ್ಟಿಯವರ ಲೈನ್, ಮಳಲಿ ಪೂಜಾರ ಕೆಲವು ಭಾಗಗಳು, ವಾರ್ಡ್ ನಂ.4ರ ಕಣವಿ ಪ್ಲಾಟ್, ಮಂಜುನಾಥನಗರ , ಟರ್ನಲ್‌ಪೇಟೆ, ಹಳೇ ಪೋಸ್ಟ್ ಆಫೀಸ್, ಬಿಎಸ್ಎನ್ಎಲ್ ಆಫೀಸ್ ಲೈನ್, ವಾರ್ಡ್ ನಂ.24, 26, 32ರ ದಾಸರ ಓಣಿ, ಸುಣಗಾರ ಓಣಿ, ಕುಂಬಾರ ಓಣಿ, ರಂಗನವಾಡ ಹಳೇ ಕಛೇರಿ ರೋಡ್, ಗುಜ್ಜರಬಸ್ತಿ, ಸಾಲಮನೆ, ಕಮ್ಮಾರ ಸಾಲ, ಅಬ್ಬಿಗೇರಿ ಕಂಪೌಂಡ್, ಮಕಾನಗಲ್ಲಿಗಳಲ್ಲಿ ನೀರು ಪೂರೈಕೆಯಾಗಲಿದೆ.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ ದಾರೆ.

### ಪ್ರತಿಭಟನಾ ಸ್ಥಳಕ್ಕಾಗಮಿಸಿ, ರೈತರ ಮನವಿ ಸ್ವೀಕರಿಸಿದ ಸಚಿವ ಎಚ್ ಕೆ.ಪಾಟೀಲ

# ಬರಪೀಡಿತ ತಾಲೂಕು ಘೋಷಣೆಗೆ ಕೇಂದ್ರದ ಮಾನದಂಡ ಅಡ್ಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವುದಕ್ಕೆ ಕೇಂದ್ರ ಸರ್ಕಾರದ ಕೆಲವು ಕಠಿಣ ಮಾನದಂಡಗಗಳು ಅಡ್ಡಿಯಾಗಿದ್ದು, ಮಾನದಂಡಗಳನ್ನು ಮರುಪರಿಶೀಲನೆಗೊಳಪಡಿಸಿ ರೈತರ ಹಿತ ಕಾಪಾಡಬೇಕು ಎಂದು ಸಿಎಂ ಸಿದ್ಧರಾಮಯ್ಯನವರು ಮತ್ತು ಕಂದಾಯ ಸಚಿವ ಕೃಷ್ಣ ಬೈರೇಗೌಡರು ಕೇಂದ್ರ ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್ ಅವರಿಗೆ ಪತ್ರ ಬರೆದಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್. ಕೆ ಪಾಟೀಲ ಹೇಳಿದರು.



ಅವರು ಸೋಮವಾರ ಪಟ್ಟಣದಲ್ಲಿ ರೈತ ಸಂಘಟನೆಗಳು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಡೆಸಿದ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ರೈತರಿಂದ ಮನವಿ ಸ್ವೀಕರಿಸಿ ಅವರ ಬೇಡಿಕೆಗಳನ್ನು ಆಲಿಸಿ ಮಾತನಾಡಿದರು.

ಶೇ.60ರಷ್ಟು ಮಳೆ ಕೊರತೆ ಇರಬೇಕು ಹಾಗೂ ನಿರಂತರ ಮೂರು ವಾರ ಮಳೆ ಇರಬಾರದೆಂಬ ನಿಯಮವಿದೆ. ಆದರೆ ಮಳೆ ಅಭಾವದಿಂದ ಪ್ರಸ್ತುತ ರಾಜ್ಯದಲ್ಲಿ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ರೈತರ ಸಂಕಷ್ಟ ಪರಿಹಾರಕ್ಕೆ ಶೇ.25ರಷ್ಟು ಮಳೆ ಕೊರತೆಯಾದ ಪ್ರದೇಶವನ್ನು ಬರಪೀಡಿತ ಎಂದು ಘೋಷಿಸಲು ಅವಕಾಶವಾಗುವಂತೆ ಮಾನದಂಡಗಳನ್ನು ಪರಿವರ್ತಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಕೋರಿದೆ. ಬರಗಾಲ ಘೋಷಣೆಗೆ 2016ರಿಂದ ಕೇಂದ್ರ ಸರ್ಕಾರ ನಿಯಮಗಳು ಬದಲಾವಣೆ ಮಾಡದಿದ್ದರೆ 135–140 ತಾಲೂಕುಗಳು ಬರಗಾಲ ಪ್ರದೇಶ ಘೋಷಣೆಯಾಗಬೇಕಾಗಿತ್ತು. ನಿಯಮ ಬದಲಾವಣೆಯ ▶▶3ನೇ ಪುಟಕ್ಕೆ

> ರಾಜ್ಯದಲ್ಲಿ ಮುಂಗಾರು ಮಳೆ ಕೈಕೊಟ್ಟಿದ್ದು, ರೈತರು ಕಂಗಾಲಾಗಿದ್ದಾರೆ. ಹೀಗಾಗಿ ಬರಪೀಡಿತ ಎಂದು ಘೋಷಣೆ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ಆದರೆ, ಇದಕ್ಕೆ ಕೇಂದ್ರ ಸರ್ಕಾರದ ಷರತ್ತುಗಳು ಅಡ್ಡಿಯಾಗುತ್ತಿವೆ. ಸದ್ಯದ ನಿಯಮಗಳ ಪ್ರಕಾರ ಕೇಂದ್ರದ ನಿಯಾಮಾವಳಿ ಪಾಲನೆ ಮಾಡುವುದು ಕಡ್ಡಾಯ. ಆದರೆ ನಿಯಮಾವಳಿ ಪಾಲಿಸಿದರೆ ರೈತರಿಗೆ ಅನ್ಯಾಯ ಆಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮನವೊಲಿಸುವ ಪ್ರಯತ್ನ ಮಾಡಲಾಗುತ್ತಿದೆ.
>
> – ಎಚ್.ಕೆ ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ಉಪ ನೋಂದಣಿ ಕಚೇರಿ ವ್ಯಾಪ್ತಿಯಲ್ಲಿ ಬರುವ ಪಟ್ಟಣ ವ ಗ್ರಾಮಗಳ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಗಳನ್ನು 2023–24ನೇ ಸಾಲಿಗೆ ಪರಿಷ್ಕರಿಸಿ ನಿರ್ಧರಿಸಲು, ಪ್ರಸ್ತಾವಿತ ನೂತನ ದರಗಳ ಕರಡು ಪ್ರತಿಯನ್ನು ಸಾರ್ವಜನಿಕರ ಮಾಹಿತಿ ಉಪನೋಂದಣಿ ಕಚೇರಿಯಲ್ಲಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಸಾರ್ವಜನಿಕರು ಸಲಹೆ, ಸೂಚನೆ ಹಾಗೂ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತ ರೂಪದಲ್ಲಿ ಪ್ರಕಟಣೆಯ 15 ದಿನಗಳೊಳಗೆ ಸಲ್ಲಿಸಬಹುದಾಗಿದೆ ಎಂದು ಲಕ್ಷ್ಮೇಶ್ವರ ಉಪ ನೋಂದಣಿ ಅಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಗದಗ ಜಿಲ್ಲಾ ಶಿಕ್ಷಕರ ಅರ್ಹತಾ ಪರೀಕ್ಷೆಯ ಪೂರ್ವಬಾವಿ ಸಭೆಯಲ್ಲಿ ಡಿಸಿ ಸೂಚನೆ

# ಪರೀಕ್ಷೆ ಪಾರದರ್ಶಕವಾಗಿ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 3ರಂದು ಜರುಗುವ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರದಂದು ಶಿಕ್ಷಕರ ಅರ್ಹತಾ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಪರೀಕ್ಷೆಯ ಸಮಯದಲ್ಲಿ ವಿದ್ಯುತ್, ಆರೋಗ್ಯ, ಸಾರಿಗೆ, ಖಜಾನೆ ವ್ಯವಸ್ಥೆ ಹಾಗೂ ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಬಂದೋಬಸ್ತ್ ಒದಗಿಸಿ ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಕ್ರಮ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿ, ▶▶3ನೇ ಪುಟಕ್ಕೆ

## ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2023ನೇ ನವೆಂಬರ್ ತಿಂಗಳಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು 8ನೇ ತರಗತಿಯಿಂದ 12ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳಿಗೆ ಮಂಡಳಿಯಿಂದ ಜಾಲತಾಣ ಸೆಂಟರ್ ಲಾಗಿನ್ ಮೂಲಕ ಮಾಹಿತಿಯನ್ನು ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 20 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ಜಾಲತಾಣವನ್ನು khttps://kseab.karnataka.gov.in/ ವೀಕ್ಷಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಎಂ.ಬಿ ತಾಪಸ್ಕರ್, ಹಿರಿಯ ಉಪನ್ಯಾಸಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಗದಗ, ಮೊಬೈಲ್–9449089703 ಅಥವಾ ವಿಷಯ ನಿರ್ವಾಹಕರ ದೂ.ಸಂ–7259807055 ಸಂಪರ್ಕಿಸಬಹುದಾಗಿದೆ.

## ಸಂಸ್ಥಾಪಕರ ದಿನಾಚರಣೆ, ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಗದಗ ಮತ್ತು ತಾಲೂಕಾ ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಸಂಸ್ಥಾಪಕರ ದಿನಾಚರಣೆ (ಲಿಂ. ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ) ಹಾಗೂ ದತ್ತಿ ಉಪನ್ಯಾಸ (ವ್ಹಿ.ಸಿ ಅಂಗಡಿ) ಕಾರ್ಯಕ್ರಮ ಮಂಗಳವಾರ ಸಂಜೆ 5–30ಕ್ಕೆ ಅಮರೇಶ್ವರ ನಗರದ ಶ್ರೀಮತಿ ಶಾರದಾ ಎಸ್.ಬೊಮ್ಮಸಾಗರ ಅವರ ನಿವಾಸದಲ್ಲಿ ಜರುಗುವುದು.

ತಾಲೂಕಾ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಪ್ರಕಾಶ ತಿ.ಅಸುಂಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಎಚ್‌ಸಿಇಎಸ್ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕ ಪ್ರೊ. ಬಿ.ಬಿ ಪಾಟೀಲ ಉಪನ್ಯಾಸ ನೀಡುವರು. ಶರಣೆ ರೇಖಾ ಪಿ.ಬಾಳಿಕಾಯಿ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಲೋಚನಾ ಎಂ.ಐಹೊಳ್ಳಿ, ದತ್ತಿ ದಾನಿಗಳಾದ ಮಹೋಹರ ವ್ಹಿ.ಅಂಗಡಿ ಹಾಗೂ ಸಹೋದರರು ಉಪಸ್ಥಿತರಿರುವರು.

ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಯ ಸರ್ವ ಸದಸ್ಯರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಡಾ. ರಾಜಶೇಖರ ದಾನರಡ್ಡಿ ವಿನಂತಿಸಿದ್ದಾರೆ.

### ರೈತಪರ ಸಂಘಟನೆಗಳು ಕರೆ ನೀಡಿದ್ದ ಲಕ್ಷ್ಮೇಶ್ವರ ಬಂದ್ ಯಶಸ್ವಿ /ರೈತರ ಬೇಡಿಕೆ ಈಡೇರಿಸಲು ಮನವಿ

# ಲಕ್ಷ್ಮೇಶ್ವರ ಸಂಪೂರ್ಣ ಸ್ತಬ್ಧ...

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಸೋಮವಾರ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರಕ್ಕೆ ಆಗ್ರಹಿಸಿ ವಿವಿಧ ರೈತಪರ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು ಸೇರಿದಂತೆ ಅನೇಕ ಸಂಘಟನೆಗಳು ಕರೆದಿದ್ದ ಲಕ್ಷ್ಮೇಶ್ವರ ಬಂದ್ ಸಂಪೂರ್ಣ ಯಶಸ್ವಿಯಾಯಿತು. ಸೋಮವಾರ ಮುಂಜಾನೆಯಿಂದಲೇ ಎಲ್ಲ ಅಂಗಡಿ ಮುಂಗಟ್ಟುಗಳು ಬಂದ್ ಆಗಿದ್ದವು. ವ್ಯಾಪಾರಸ್ಥರು, ಎಪಿಎಂಸಿ, ಬೀದಿ ಬದಿ ವ್ಯಾಪಾರಸ್ಥರು ಹೋರಾಟಕ್ಕೆ ಬೆಂಬಲ ಸೂಚಿಸಿದ್ದರಿಂದ, ಇಡೀ ಪಟ್ಟಣ ಯಾವುದೇ ವಹಿವಾಟು ಇಲ್ಲದೆ ಸ್ಥಬ್ಧವಾಗಿತ್ತು. ಶಾಲಾ ಕಾಲೇಜುಗಳು ಎಂದಿನಂತೆ ನಡೆದಿದ್ದು, ಬಸ್ ಸಂಚಾರದಲ್ಲಿ ಕೆಲ ಕಾಲ ವ್ಯತ್ಯಯವಾಗಿತ್ತು.



ಹೋರಾಟದಲ್ಲಿ ರೈತಪರ ಸಂಘಟನೆಗಳಾದ ಪಕ್ಷಾತೀತ ರೈತಪರ ಹೋರಾಟ ವೇದಿಕೆ, ಕಿಸಾನ್ ಜಾಗೃತಿ ಸಂಘ, ಭಾರತಿಯ ಕಿಸಾನ್ ಸಂಘ, ಕೃಷಿಕ ಸಮಾಜ ನವದೆಹಲಿ, ರಾಷ್ಟ್ರಿಯ ರೈತ ಸಂಘಟನೆ, ಕನ್ನಡಪರ ಸಂಘಟನೆಗಳು ಪಾಲ್ಗೊಂಡಿದ್ದವು.

ಈ ಸಂದರ್ಭದಲ್ಲಿ ಪಕ್ಷಾತೀತ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ ಮತ್ತು ಕೃಷಿಕ ಸಮಾಜ ನವದೆಹಲಿ ರಾಜ್ಯಾಧ್ಯಕ್ಷೆ ಮಾಣಿಕಮ್ಮ ಚಿಲ್ಲೂರ ಮಾತನಾಡಿ, ಈ ವರ್ಷದ ಮುಂಗಾರು ಮಳೆ ಕೈಕೊಟ್ಟಿದೆ. ರೈತರು ಇದೀಗ ಕೈಯಲ್ಲಿದ್ದ ಹಣವನ್ನೆಲ್ಲಾ ಕಳೆದುಕೊಂಡು ಬರಿಗೈಯಲ್ಲಿ ನಿಂತಂತಾಗಿದೆ. ರಾಜ್ಯದಲ್ಲಿ 120 ತಾಲೂಕಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿದ್ದು, ಲಕ್ಷ್ಮೇಶ್ವರ ತಾಲೂಕಿನಲ್ಲಿಯೂ ಸಂಪೂರ್ಣವಾಗಿ ಮಳೆಯ ಕೊರತೆಯಾಗಿದೆ. ಆದರೂ ಸಹ ತಾಲೂಕನ್ನು ಬರಗಾಲ ಪ್ರದೇಶವೆಂದು ಘೋಷಿಸಿಲ್ಲ. ಈ ▶▶3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

**ಕೀರ್ತಿ ಬಂದಾಗ ಸತ್ತ ಮನುಷ್ಯನೂ ಜೀವಂತನಾಗುತ್ತಾನೆ. ಅದಿಲ್ಲದಿದ್ದರೆ ಬದುಕಿದ್ದ ಮನುಷ್ಯನೂ ಸತ್ತ ಹಾಗೆ.**

**–ವ್ಯಾಸ ಮಹಾಭಾರತ**

## ಸಂಪಾದಕೀಯ

# ರಾಜ್ಯ ಸರ್ಕಾರಕ್ಕೆ ಶಕ್ತಿ ಬಿಸಿ

ಕಾಂಗ್ರೆಸ್ ಸರ್ಕಾರದ 5 ಪ್ರಮುಖ ಗ್ಯಾರಂಟಿಗಳಲ್ಲಿ ಶಕ್ತಿ ಯೋಜನೆಯು ಒಂದು. ಸರ್ಕಾರ ಅಧಿಕಾರಕ್ಕೆ ಬಂದ ನಂತರ ಜಾರಿಯಾದ ಮೊದಲ ಯೋಜನೆ. ಜೊತೆಗೆ ಯಾವುದೇ ಶರತ್ತು ಇಲ್ಲದಂತೆ ಜಾರಿಗೊಂಡ ಕಾಂಗ್ರೆಸ್ಸಿನ ಮೊದಲ ಗ್ಯಾರಂಟಿಯೂ ಹೌದು.

ಮಹಿಳಾ ಸಬಲೀಕರಣದಲ್ಲಿ ಶಕ್ತಿ ಯೋಜನೆ ಅತ್ಯಂತ ಪರಿಣಾಮಕಾರಿಯಾಗಿದೆ ಎಂದು ಕಾಂಗ್ರೆಸ್ ನಾಯಕರು ಆಗಾಗ ಹೇಳಿಕೊಳ್ಳುತ್ತಲೇ ಇದ್ದಾರೆ. ಅದು ನಿಜವೂ ಹೌದು. ಶಕ್ತಿ ಯೋಜನೆ ಜಾರಿಯಾದ ನಂತರ ಮಹಿಳೆಯರು ಹೆಚ್ಚು ಪ್ರಯಾಣಿಸುತ್ತಿದ್ದಾರೆ. ರಾಜ್ಯ ಸರ್ಕಾರದ ನಿರ್ಣಯಕ್ಕೆ ಮೆಚ್ಚುಗೆಯನ್ನು ವ್ಯಕ್ತಪಡಿಸುತ್ತಿದ್ದಾರೆ.

ಆದರೆ ಶಕ್ತಿ ಯೋಜನೆ ಖಾಸಗಿ ಬಸ್, ಕ್ಯಾಬ್ ಮಾಲೀಕರಿಗೆ ಸಂಕಷ್ಟ ತಂದೊಡ್ಡಿದೆ. ಅದರಲ್ಲೂ ಕರಾವಳಿ ಮತ್ತು ದಕ್ಷಿಣ ಕರ್ನಾಟಕ ಭಾಗದಲ್ಲಿ ಸಾರಿಗೆ ಸಂಸ್ಥೆಯ ಬಸ್ಸುಗಳಿಗಿಂತ ಖಾಸಗಿ ವಾಹನಗಳ ಸಂಚಾರವೇ ಹೆಚ್ಚು. ಜನರು ಸಹ ಸಾರಿಗೆ ಸಂಸ್ಥೆಗಳ ಬಸ್ಸುಗಳಿಗಿಂತ, ಖಾಸಗಿ ಬಸ್ಸುಗಳನ್ನೇ ಹೆಚ್ಚಾಗಿ ಅವಲಂಬಿಸಿದ್ದರು.

ಆದರೆ ಶಕ್ತಿ ಯೋಜನೆ ಜಾರಿ ನಂತರ ಜನ ಖಾಸಗಿ ಸಂಸ್ಥೆಯ ಬಸ್ಸುಗಳನ್ನೇ ಮರೆತರು. ಕ್ಯಾಬ್ ಹತ್ತುವುದನ್ನಂತು ಮೊದಲೇ ನಿಲ್ಲಿಸಿದರು. ಹೀಗಾಗಿ ರಾಜ್ಯದ ಲಕ್ಷಾಂತರ ಜನ ಖಾಸಗಿ ಬಸ್ ಮತ್ತು ಮ್ಯಾಕ್ಸ್ ಕ್ಯಾಬ್ ಮಾಲಕರು, ಚಾಲಕರು ಮತ್ತು ನಿರ್ವಾಹಕರು ಬೀದಿಗೆ ಬೀಳುವಂತಾಯಿತು.

ಸರ್ಕಾರ ಶಕ್ತಿ ಯೋಜನೆ ಜಾರಿಗೊಳಿಸುವುದು ಬೇಡ ಎನ್ನುವ ಹಕ್ಕೊತ್ತಾಯವನ್ನ ಖಾಸಗಿ ವಾಹನ ಮಾಲೀಕರು ಆರಂಭದಲ್ಲೇ ಮಾಡಿದ್ದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಖಾಸಗಿ ವಾಹನ ಮಾಲೀಕರಿಗೆ ವಿಶೇಷ ಪ್ಯಾಕೇಜ್ ನೀಡುವ ಭರವಸೆಯನ್ನು ನೀಡಿದ್ದರು. ನುಡಿದಂತೆ ನಡೆದಿದ್ದೇವೆ ಎನ್ನುವ ಕಾಂಗ್ರೆಸ್ ಸರ್ಕಾರ, ಖಾಸಗಿ ವಾಹನ ಮಾಲೀಕರ ವಿಷಯದಲ್ಲಿ ಎಡವಿದೆ. ಅನಿವಾರ್ಯವಾಗಿ ಖಾಸಗಿ ವಾಹನ ಮಾಲೀಕರು ಬೀದಿಗಿಳಿದು ಹೋರಾಟ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಕೋವಿಡ್ ಕಾರಣದಿಂದ ಸಾಕಷ್ಟು ನಷ್ಟ ಅನುಭವಿಸಿದ್ದ ಖಾಸಗಿ ಬಸ್ ಮತ್ತು ಮ್ಯಾಕ್ಸಿಕ್ಯಾಬ್ ಮಾಲೀಕರು, ಶಕ್ತಿ ಯೋಜನೆಯಿಂದ ಅಂತಹದ್ದೇ ಸಮಸ್ಯೆಯನ್ನ ಎದುರಿಸುವಂತಾಗಿದೆ. ಬೇರೆ ದಾರಿ ಕಾಣದೆ ಖಾಸಗಿ ವಾಹನ ಮಾಲೀಕರು ಬಂದ್ ಮಾಡುವ ಎಚ್ಚರಿಕೆಯನ್ನು ನೀಡಿದ್ದಾರೆ. ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ. ಬಡವರ ಕಲ್ಯಾಣ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ. ಆದರೆ ಅದೇ ಬಡವರ ಒಂದು ಗುಂಪಿಗೆ ಶಕ್ತಿ ಯೋಜನೆಯಿಂದ ಅನ್ಯಾಯವಾಗಿದೆ. ಅದನ್ನ ಸರಿಪಡಿಸಬೇಕಾದದ್ದು ಸರ್ಕಾರದ ಕರ್ತವ್ಯ.

ಖಾಸಗಿ ಬಸ್ ಮತ್ತು ಮ್ಯಾಕ್ಸಿ ಕ್ಯಾಬ್ ವಾಹನ ಮಾಲೀಕರಿಂದ ದುಪ್ಪಟ್ಟು ತೆರಿಗೆ ಪಡೆಯುವ ರಾಜ್ಯ ಸರ್ಕಾರ, ಅವರ ಕಷ್ಟಗಳಿಗೂ ಸ್ಪಂದಿಸಬೇಕಿದೆ. ಶಕ್ತಿ ಯೋಜನೆ ಜಾರಿಗೂ ಮುನ್ನ ನೀಡಿದ ಭರವಸೆಯಂತೆ ನಡೆದುಕೊಳ್ಳಬೇಕಿದೆ.


## ಇಂದು 'ರಾಷ್ಟ್ರೀಯ ಕ್ರೀಡಾ ದಿನ'ದ ನಿಮಿತ್ತ ವಿಶೇಷ ಲೇಖನ

# ಕ್ರೀಡೆ ಬದುಕಿನ ಚೈತನ್ಯದ ಚಿಲುಮೆ

ಕ್ರೀಡೆ ಮನುಷ್ಯನ ಸೋಮಾರಿತನವನ್ನು ತೊಡೆದು ಹಾಕಿ, ಮನಸ್ಸು ಮತ್ತು ದೇಹಕ್ಕೆ ಹೊಸ ಚೈತನ್ಯವನ್ನು ತುಂಬುತ್ತದೆ. ಆರೋಗ್ಯವಂತ ವ್ಯಕ್ತಿ ಮತ್ತು ವ್ಯಕ್ತಿತ್ವವನ್ನು ರೂಪಿಸುವಲ್ಲಿ ಕ್ರೀಡೆಗಳು ವಹಿಸುವ ಪಾತ್ರ ಮಹತ್ವದ್ದಾಗಿದೆ. ಕ್ರೀಡೆ ಎಂಬುದು ಮನುಷ್ಯನನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಬಲಿಷ್ಠನನ್ನಾಗಿಸುವ ಚಟುವಟಿಕೆ ಮಾತ್ರವಲ್ಲ, ಮನೋರಂಜನೆಯನ್ನು ಪಡೆಯಲು ಮನುಷ್ಯ ಕಂಡುಕೊಂಡ ಅತ್ಯುತ್ತಮ ಮಾರ್ಗವೂ ಹೌದು. ಶಿಸ್ತನ್ನು ಅಳವಡಿಸಿಕೊಳ್ಳಲು ಪ್ರೇರಣೆ ನೀಡುತ್ತದೆ. ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸುತ್ತದೆ.

ಭಾರತದ ಶ್ರೇಷ್ಠ ಹಾಕಿ ಆಟಗಾರರಾಗಿದ್ದ ಮೇಜರ್ ಧ್ಯಾನ್ ಚಂದ್ ರವರ ಜನ್ಮದಿನದ ಸ್ಮರಣಾರ್ಥ ಭಾರತದಲ್ಲಿ ಪ್ರತಿ ವರ್ಷ ಆಗಸ್ಟ್ 29ರಂದು 'ರಾಷ್ಟ್ರೀಯ ಕ್ರೀಡಾ ದಿನ'ವನ್ನು ಆಚರಿಸಲಾಗುತ್ತದೆ. ರಾಷ್ಟ್ರೀಯ ಕ್ರೀಡಾ ದಿನದ ಆಚರಣೆಯನ್ನು ಭಾರತದಲ್ಲಿ ಮೊದಲ ಬಾರಿಗೆ 2012ರಲ್ಲಿ ಪ್ರಾರಂಭಿಸಲಾಯಿತು. ದೈಹಿಕ ಚಟುವಟಿಕೆಗಳು ಮತ್ತು ಕ್ರೀಡೆಗಳ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶ.

ದೇಶ ಕಂಡ ಅಪ್ರತಿಮ ಶ್ರೇಷ್ಠ




ಕ್ರೀಡಾಪಟು ಮೇಜರ್ ಧ್ಯಾನ್‌ಚಂದ್ ಇವರು ಉತ್ತರ ಪ್ರದೇಶದ ಅಲಹಾಬಾದ್‌ನಲ್ಲಿ 1905ರ ಆಗಸ್ಟ್ 29ರಂದು ಜನಿಸಿದರು. ಹಾಕಿ ಸ್ಟಿಕ್‌ನ ಅಪೂರ್ವ ಕೌಶಲ್ಯದಿಂದ ಜಗತ್ತನ್ನೇ ಮಂತ್ರಮುಗ್ಧಗೊಳಿಸಿದ್ದರು. 14ನೇ ವಯಸ್ಸಿನಲ್ಲೇ ಹಾಕಿ ಸ್ಟಿಕ್ ಹಿಡಿದ ಅವರು, 1926ರಲ್ಲಿ ಅಂತಾರಾಷ್ಟ್ರೀಯ ಹಾಕಿ ಪ್ರವೇಶಿಸಿದರು. ತನ್ನ 16ನೇ ವಯಸ್ಸಿನಲ್ಲಿ ಸೈನಿಕ ಹುದ್ದೆಗೆ ಸೇರಿದ ನಂತರ ಹಾಕಿಯನ್ನು ಕಲಿಯಲು ಪ್ರಾರಂಭಿಸಿ ಹಗಲು–ರಾತ್ರಿ ಎನ್ನದೆ ಕಠಿಣ ಶ್ರಮದಿಂದ ಕೌಶಲ್ಯಗಳ ಪರಿಣತಿಯನ್ನು ಗಳಿಸಿದ್ದರು. ಧ್ಯಾನ್‌ಚಂದ್ ರಾತ್ರಿ ವೇಳೆಯಲ್ಲಿ ಚಂದ್ರನ ಬೆಳಕಿನಲ್ಲಿ ಅಭ್ಯಾಸ ಮಾಡುವುದನ್ನು ನೋಡಿ ಅವನ ಸ್ನೇಹಿತರು ಅವನಿಗೆ ಚಂದ್ ಎಂದು ಕರೆಯುತ್ತಿದ್ದರು. ಹಾಗಾಗಿ ಧ್ಯಾನ್ ಸಿಂಗ್ ಬದಲಾಗಿ ಧ್ಯಾನ್‌ಚಂದ್ ಎಂದು ಪ್ರಖ್ಯಾತರಾದರು. ಅವರನ್ನು 'ಹಾಕಿ ಮಾಂತ್ರಿಕ' ಎಂದೇ ಕರೆಯಲಾಗುತ್ತದೆ. ಅವರ ನಾಯಕತ್ವದಲ್ಲಿ, 1928, 1932 ಹಾಗೂ 1936ರಲ್ಲಿ ನಡೆದ ಒಲಿಂಪಿಕ್ಸ್‌ನಲ್ಲಿ ಮೂರು ಚಿನ್ನದ ಪದಕವನ್ನು ಭಾರತಕ್ಕೆ ತಂದು ಕೊಟ್ಟಿದ್ದಾರೆ.

ಆದಾಗ್ಯೂ ಇಂದಿನ ಸಂದರ್ಭದಲ್ಲಿ ಕ್ರೀಡಾ ಸಾಧಕರು ಅನೇಕ ತೊಡಕುಗಳನ್ನು ಎದುರಿಸುತ್ತಿರುವ ಸಂಗತಿ ನಮ್ಮ ಕಣ್ಣ ಮುಂದೆ ಇರುವುದನ್ನು ಕಾಣುತ್ತೇವೆ. ಶೈಕ್ಷಣಿಕವಾಗಿ ಮಕ್ಕಳನ್ನು ತುಂಬಾ ಎತ್ತರಕ್ಕೆ ಕೊಂಡೊಯ್ಯಲು ಹಪಹಪಿಸುವ ಪೋಷಕರಿಗೆ ಕ್ರೀಡೆಯೆಂದರೆ ಅದೇನೋ ನಿರ್ಲಕ್ಷ್ಯ. ಕ್ರೀಡೆಗಳು ಮಕ್ಕಳ ಅಧ್ಯಯನಕ್ಕೆ ತಡೆಯುಂಟು ಮಾಡುತ್ತದೆ, ರ್‍ಯಾಂಕ್ ಪಡೆಯುವುದರಿಂದ ಅವರನ್ನು ವಂಚಿಸುತ್ತದೆ ಎಂಬ ತಪ್ಪು ಕಲ್ಪನೆ ಬಹುತೇಕರಲ್ಲಿದೆ.

ವಿಸ್ತೀರ್ಣ ಮತ್ತು ಜನಸಂಖ್ಯೆ ಎರಡರಲ್ಲೂ ದೊಡ್ಡದಾಗಿರುವ ಭಾರತ ಒಲಿಂಪಿಕ್ಸ್‌ನಂತಹ ಪ್ರತಿಷ್ಠಿತ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಮಾಡುವ ಸಾಧನೆ ತುಂಬಾ ಕಡಿಮೆಯಾಗಿದೆ. ಕ್ರೀಡೆಯ ಬಗೆಗಿನ ಅರಿವಿನ ಕೊರತೆ, ಸೂಕ್ತ ತರಬೇತಿ ಪಡೆಯಲು ಸಾಧ್ಯವಾಗದೆ ಇರುವುದು, ಪ್ರೋತ್ಸಾಹಗಳು ಇಲ್ಲದೇ ಇರುವುದು ಭಾರತದ ಕಡಿಮೆ ಸಾಧನೆಗೆ ಪ್ರಮುಖ ಕಾರಣಗಳಾಗಿವೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಪ್ರಸ್ತುತ ಈ ನಿಟ್ಟಿನಲ್ಲಿ ಹೆಚ್ಚು ಕಾರ್ಯೋನ್ಮುಖವಾಗಿವೆಯಾದರೂ, ಇನ್ನಷ್ಟು ಶ್ರಮ ಹಾಕುವುದು ಅತ್ಯಗತ್ಯವಾಗಿದೆ.

ಪಿ.ವಿ ಸಿಂಧು, ಹಿಮಾ ದಾಸ್, ಸೈನಾ ನೆಹ್ವಾಲ್, ಸಾನಿಯಾ ಮಿರ್ಜಾ, ಅಭಿನವ್ ಬಿಂದ್ರಾ, ಮೇರಿ ಕೋಮ್, ವಿಜೇಂದರ್ ಸಿಂಗ್, ಯೋಗೇಶ್ವರ್ ದತ್ತ್ ಮುಂತಾದ ಅನೇಕ ಕ್ರೀಡಾಪಟುಗಳು ಭಾರತದ ಕೀರ್ತಿಯನ್ನು ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಬೆಳಗಿಸಿದ್ದಾರೆ. ಭಾರತದ ಕ್ರಿಕೆಟ್ ತಂಡ ವಿಶ್ವದ ಅಗ್ರಗಣ್ಯ ತಂಡಗಳಲ್ಲಿ ಒಂದಾಗಿದೆ. ಮಹಿಳಾ ಕ್ರಿಕೆಟ್ ತಂಡವೂ ಮಿಂಚುತ್ತಿದೆ. ಭಾರತದ ಹಾಕಿ ತಂಡ ಕೂಡ ಮಹತ್ತರವಾದ ಸಾಧನೆಗಳನ್ನು ಮಾಡುತ್ತಿದೆ. ಹೀಗಿರುವಾಗ ಕ್ರೀಡೆಯಲ್ಲಿ ಉತ್ತಮ ಭವಿಷ್ಯವಿಲ್ಲ ಎಂದು ಮರುಗುವ ಬದಲು, ತಾವೇ ಕ್ರೀಡೆಯ ಭವಿಷ್ಯವಾಗುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಯೋಚನೆ ಮಾಡಬೇಕಿದೆ.

ಇಂತಹ ಶ್ರೇಷ್ಠ ಕ್ರೀಡಾಪಟುವಿನ ಜನ್ಮ ದಿನದಂದು ಭಾರತೀಯ ಕ್ರೀಡಾಪಟುಗಳಿಗೆ ವಿಶೇಷ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ. ಪ್ರತಿಷ್ಠಿತ ಪ್ರಶಸ್ತಿಗಳಾದ ಅರ್ಜುನ ಪ್ರಶಸ್ತಿ, ಧ್ಯಾನ್ ಚಂದ್ ಪ್ರಶಸ್ತಿ, ರಾಜೀವ್ ಗಾಂಧಿ ಖೇಲ್ ರತ್ನ ಮತ್ತು ದ್ರೋಣಾಚಾರ್ಯ ಪ್ರಶಸ್ತಿಗಳನ್ನು ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ರಾಷ್ಟ್ರಪತಿಗಳು ನೀಡುತ್ತಾರೆ. ಈ ದಿನ ಅನೇಕ ಕ್ರೀಡಾಕೂಟಗಳು ದೇಶಾದ್ಯಂತ ನಡೆಯುತ್ತವೆ.



**– ಬಸವರಾಜ ಎಮ್.ಯರಗುಪ್ಪಿ.**
ರಾಮಗೇರಿ, ಲಕ್ಷ್ಮೇಶ್ವರ.

# ಯಾವ ಶಾಸಕರೂ ಜೆಡಿಎಸ್ ಬಿಡಲ್ಲ; ಮಾಜಿ ಪ್ರಧಾನಿ ದೇವೇಗೌಡ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಮಗೆ ಯಾವ ಪಕ್ಷದ ಮೇಲೂ ದ್ವೇಷ ಇಲ್ಲ. ನಮ್ಮ ಪಕ್ಷ ಸಂಘಟನೆಗೆ ಕೆಲಸ ಮಾಡುತ್ತಿದ್ದೇವೆ. ನಾನು ಕೂಡ ಪಕ್ಷದ ಸಂಘಟನೆಯಲ್ಲಿ ತೊಡಗಿಕೊಳ್ಳುತ್ತೇನೆ. ಯಾವ ಶಾಸಕರೂ ಜೆಡಿಎಸ್ ಬಿಟ್ಟು ಹೋಗುವುದಿಲ್ಲ ಎಂದು ಜೆಡಿಎಸ್ ವರಿಷ್ಠ ಹೆಚ್ ಡಿ ದೇವೇಗೌಡ ತಿಳಿಸಿದರು.

ಬೆಂಗಳೂರಿನಲ್ಲಿ ಸೋಮವಾರ ಸುದ್ದಿಗೋಷ್ಠಿ ಕರೆದು ಮಾತನಾಡಿದ ಅವರು, "ನಮ್ಮ ಶಾಸಕರು ಪಕ್ಷ ಬಿಟ್ಟು ಹೋಗಲಿದ್ದಾರೆ ಎಂಬುದು ಬರೀ ಊಹಾಪೋಹ" ಎಂದು ಪಕ್ಷಾಂತರ ವದಂತಿಗೆ ಸ್ಪಷ್ಟನೆ ನೀಡಿದರು. "ಜೆಡಿಎಸ್ ಸಂಘಟನೆ ದೃಷ್ಟಿಯಿಂದ ಹಲವು ಕಾರ್ಯಕ್ರಮ ಆಯೋಜನೆ ಮಾಡುತ್ತಿದ್ದೇವೆ. ಬಿಜೆಪಿ, ಕಾಂಗ್ರೆಸ್ ನಡುವೆ ನಮ್ಮ ಪಕ್ಷ ಉಳಿಸುವ ಸಂಕಲ್ಪ ಮಾಡಿದ್ದೇವೆ. ಜಿ ಟಿ ದೇವೇಗೌಡರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿ ಮಾಡಿ ರಾಜ್ಯಾದ್ಯಂತ ಪ್ರವಾಸ ಆಯೋಜನೆ ಮಾಡಲಾಗುವುದು" ಎಂದರು.

# ಬಸವಾದಿ ಶರಣರ ತತ್ವಗಳು ಬದುಕಿಗೆ ಬೆಳಕಾಗಿವೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವಾದಿ ಶರಣರ ವಚನ ಚಿಂತನೆಯ ಸಂದೇಶಗಳು ಎಲ್ಲೆಡೆಯೂ ಪುಷ್ಪದಂತೆ ಘಮ ಘಮಿಸುತ್ತಿದ್ದೆ. ಅಲ್ಲಮಪ್ರಭು ದೇವರ ಕುರಿತಾಗಿ ಮತ್ತು ಬಸವಾದಿ ಶರಣರ ತತ್ವಗಳು ಉತ್ತಮವಾದ ಬದುಕಿಗೆ ಬೆಳಕಾಗಿದೆ ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಶರಣ ಡಾ. ರಾಜಶೇಖರ ದಾನರಡ್ಡಿ ಅವರು ಹೇಳಿದರು.

ಅವರು ಶಿವಾನಂದ ನಗರದ ಶರಣ ಎಸ್.ಎ ಸೋಮಗೊಂಡ ಅವರ ನಿವಾಸದಲ್ಲಿ ನಡೆದ ವಚನ ಶ್ರಾವಣದ 10ನೇ ದಿನದ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ನಿವೃತ್ತ ಶಿಕ್ಷಕ, ಶರಣ ಶಿವಾನಂದ ಹೊಂಬಳ ದಂಪತಿಗಳಿಗೆ ಎಸ್.ಎ ಸೋಮಗೊಂಡ ಕುಟುಂಬದವರು ಸನ್ಮಾನಿಸಿ ಗೌರವಿಸಿದರು. ಹಿರಿಯ ಅನುಭವಿಗಳಾದ ಕೆ.ಎಚ್ ಬೇಲೂರು, ಅಶೋಕ ಬರಗುಂಡಿ, ಶಿವಣ್ಣ ಮುಗದ, ಗೌರಕ್ಕ ಬಡಿಗಣ್ಣವರ, ಶಿವಾನಂದ ಹೊಂಬಳ, ಡಾ. ರಾಜಶೇಖರ ದಾನರೆಡ್ಡಿ, ಡಾ. ಗೋವಿಂದಪ್ಪನವರು, ಶಾರದಾ ಸೋಮಗೊಂಡ, ಅರುಣ ಸೋಮಗೊಂಡ, ಉದಯ ಸೋಮಗೊಂಡ, ನವೀನ ಸೋಮಗೊಂಡ, ಪ್ರತೀಕ ಸೋಮಗೊಂಡ, ಬಿ.ಎ ಸೋಮಗೊಂಡ, ಈಶ್ವರಪ್ಪ ಸೋಮಗೊಂಡ, ಸುಮಂಗಲಾ ಸೋಮಗೊಂಡ, ಉಮಾದೇವಿ ಹೊಂಬಳ, ಗೌರಕ್ಕ ಬಡಿಗಣ್ಣವರ, ಸಹನಾ ಆಲತಗಿ, ಗಿರಿಜಾ ಹಿರೇಮಠ, ಎಸ್.ಎನ್ ಹಂಚಿನಾಳ, ಶಿವಣ್ಣ ಮುಗದ, ಅಶೋಕ ಬರಗುಂಡಿ, ಸಿ.ಆರ್ ಗಡಾದ, ಅಲ್ಲಮಪ್ರಭು ಬಡಿಗಣ್ಣವರ, ನಾಗಭೂಷಣ ಬಡಿಗಣ್ಣವರ, ವಿ.ಕೆ ಕರಿಗೌಡ್ರು, ಬಿ.ವಿ ಕಾಮಣ್ಣವರ, ಎಸ್.ಎನ್ ಹಕಾರಿ, ಸಂತೋಷ ನರಗುಂದ, ಶಂಕರಪ್ಪ ಹೊಂಬಳ, ಲಲಿತಾ ಬೇಲೂರು, ರೇಣುಕಾ ಕರಿಗೌಡ್ರು, ಮಂಗಳಕ್ಕ ಕಾಮಣ್ಣವರ, ಸುಮಂಗಲಾ ಬಸೇಗಣ್ಣವರ, ರೂಪಕ್ಕ, ಗಂಗಮ್ಮ ಹೂಗಾರ, ಪ್ರಕಾಶ್ ಅಸುಂಡಿ, ಸಿದ್ದಲಿಂಗಪ್ಪ ಹಂಚಿನಾಳ, ನೀಲಕ್ಕ ಮರಳಿ, ಸಂಗನಬಸವ ಆನೆಹೊಸೂರು, ಬಸವರಾಜ ಕೋಟಗೇರ, ಡಾ. ಎ.ಡಿ ಉಳಪಲ್ಲೆ, ಅಂದಾನೆಪ್ಪ ಕೆಂಭಾವಿ, ಪಿ.ಜಿ ಅಯ್ಯನಗೌಡ್ರು, ಮುಂತಾದ ಬಸವಾಭಿಮಾನಿಗಳು ಪಾಲ್ಗೊಂಡಿದ್ದರು.

ಶಂಕರಪ್ಪ ಹೊಂಬಳ, ಶಿವಾನಂದ ಹೊಂಬಳ ವಚನಗೀತೆ ಹಾಡಿದರು. ಉದಯ ಸೋಮಗೊಂಡ ಸ್ವಾಗತಿಸಿದರು. ಪ್ರಕಾಶ್ ಅಸುಂಡಿ ನಿರೂಪಿಸಿದರು. ಸಹನಾ ಆಲತಗಿ ವಚನ ಗೀತೆ ಹಾಡಿದರು.

# ಸಚಿವ ಎಚ್.ಕೆ ಪಾಟೀಲರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲರು ಸೋಮವಾರ ಸಾಯಂಕಾಲ ನಗರದ ಕಾಟನ್ ಸೇಲ್ ಸೊಸೈಟಿಯ ತಮ್ಮ ಕಾರ್ಯಾಲಯದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆ ಪರಿಹಾರಕ್ಕಾಗಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಕಲ್ಲೂರ ಗ್ರಾಮದಿಂದ ಗದುಗಿಗೆ ಸಮರ್ಪಕ ಬಸ್ ಸೌಲಭ್ಯ ಒದಗಿಸಲು ವಿದ್ಯಾರ್ಥಿಗಳ ಮನವಿಗೆ ಸ್ಪಂದಿಸಿದ ಸಚಿವರು, ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆ ಪರಿಹರಿಸಲು ಸೂಚಿಸಿದರು. ಸಮಾಜ ಕಲ್ಯಾಣ ಇಲಾಖೆಯಿಂದ ನೀಡಲಾಗುವ ಶಿಷ್ಯ ವೇತನ, ವಸತಿ ಶಾಲೆ ಪ್ರವೇಶಾತಿ, ಆಶ್ರಯ ಮನೆ ಮಂಜೂರಾತಿ ಕೋರಿ ಕಂದಾಯ ಇಲಾಖೆ, ಆಹಾರ ಇಲಾಖೆ, ಕಾರ್ಮಿಕ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಶಿಕ್ಷಣ, ಆರೋಗ್ಯ ಇಲಾಖೆಗಳಿಗೆ ಸಂಭಂದಿಸಿದಂತೆ ಸಾರ್ವಜನಿಕರು ನೀಡಿದ ಮನವಿಗಳನ್ನು ಸಚಿವರು ಸ್ವೀಕರಿಸಿದರು.

ಎಲ್ಲ ಮನವಿಗಳನ್ನು ಆಲಿಸಿ, ಕೆಲವುಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡಿದರು.

ಇನ್ನುಳಿದ ಮನವಿಗಳನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನೀಡಿ ಪರಿಹಾರ ಮಾಡುವಂತೆ ಸಚಿವರು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಿ ಪಂ ಉಪಕಾರ್ಯದರ್ಶಿ ಸಿ.ಆರ್ ಮುಂಡರಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

# ಸಂಸ್ಥಾಪಕರ ದಿನಾಚರಣೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಗದಗ ಮತ್ತು ಜಿಲ್ಲಾ ಕದಳಿ ಮಹಿಳಾ ವೇದಿಕೆ, ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಸಂಸ್ಥಾಪಕರ ದಿನಾಚರಣೆ (ಲಿಂ. ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ) ಕಾರ್ಯಕ್ರಮವು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ನಗರದ ಶ್ರೀ ತೋಂಟದಾರ್ಯ ಮಠದ ಆವರಣದಲ್ಲಿರುವ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಜರುಗುವುದು.

ಅಧ್ಯಕ್ಷತೆಯನ್ನು ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಕಾರ್ಯದರ್ಶಿ ಡಾ. ರಾಜಶೇಖರ ಎಸ್.ದಾನರಡ್ಡಿ ವಹಿಸುವರು. ಮುಖ್ಯ ಅತಿಥಿಗಳಾಗಿ ಪಿಪಿಜಿ ಸಂಗೀತ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಪ್ರೊ. ವ್ಹಿ.ಎಂ ಗುರುಮಠ ಆಗಮಿಸುವರು. ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಪ್ರೊ. ಸುಧಾ ಹುಚ್ಚಣ್ಣವರ ಉಪಸ್ಥಿತರಿರುವರು.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಸರ್ವ ಸದಸ್ಯರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಇಂಡಿಯಾ ಮೈತ್ರಿಯ ಸಂಚಾಲಕ ಹುದ್ದೆಯ
# ಆಶೆ ನನಗಿಲ್ಲ; ನಿತೀಶ್ ಕುಮಾರ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ವಿರೋಧ ಪಕ್ಷಗಳ ಒಕ್ಕೂಟ ಇಂಡಿಯಾ ಒಕ್ಕೂಟದ ಮೂರನೇ ಸಭೆ ಮುಂಬೈನಲ್ಲಿ ಆಗಸ್ಟ್ 31ರಿಂದ ಎರಡು ದಿನಗಳ ಕಾಲ ನಡೆಯುತ್ತಿದೆ. ಈ ಸಭೆಗೆ ಮುನ್ನ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಸಂಚಾಲಕರಾಗುತ್ತಾರೆಯೇ ಎನ್ನು ಪ್ರಶ್ನೆಗೆ ಪ್ರತಿಕ್ರಿಸಿದ್ದಾರೆ.

ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ನಿತೀಶ್ ಕುಮಾರ್ ಅವರು, "ವಿರೋಧ ಪಕ್ಷಗಳನ್ನು ಒಗ್ಗೂಡಿಸಲು ಬಯಸಿದ್ದೇನೆ ಆದರೆ INDIA ಒಕ್ಕೂಟದ ಸಂಚಾಲಕರಾಗಲು ಬಯಸುವುದಿಲ್ಲ" ಎಂದು ಹೇಳಿದ್ದಾರೆ.

"ನಾನು ಯಾವ ಹುದ್ದೆಗೂ ಹೋಗಲು ಬಯಸುವುದಿಲ್ಲ. ನನಗೆ ಯಾವ ಮಹತ್ವಾಕಾಂಕ್ಷೆಗಳು ಇಲ್ಲ ಎಂದು ಮತ್ತೆ ಮತ್ತೆ ಹೇಳುತ್ತಿದ್ದೇನೆ" ಎಂದು ಹೇಳಿದ್ದಾರೆ.

## ಸ್ಟುಡೆಂಟ್ ಎಜ್ಯುಕೇಶನ್ ಸೊಸೈಟಿಯ ಸಂಸ್ಥಾಪನಾ ದಿನಾಚರಣೆ
# ಸಂಸ್ಥೆಯಿಂದ ಪಡೆದ ಶಿಕ್ಷಣದ ಸದ್ಬಳಕೆಯಾಗಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ 6 ವರ್ಷ ಪೂರೈಸಿ, 7ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವ ಈ ಸಂಸ್ಥೆ ಕೇವಲ 6 ವರ್ಷಗಳಲ್ಲಿ ತನ್ನದೇ ಆದ ರೂಪು–ಛಾಪುಗಳನ್ನು ಮೂಡಿಸಿಕೊಂಡು ವಿದ್ಯಾರ್ಥಿಗಳ ಜ್ಞಾನದ ಹಸಿವನ್ನು ನೀಗಿಸುತ್ತಿರುವ ಮುಂಚೂಣಿಯ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ನಗರದ ಅಬ್ದುಲ್ ಕಲಾಂ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಚೈತ್ರಾ ಚೌಗುಲೆ ಅಭಿಪ್ರಾಯಪಟ್ಟರು.

ಅವರು ರವಿವಾರ ಜರುಗಿದ ಸ್ಟುಡೆಂಟ್ ಎಜ್ಯುಕೇಶನ್ ಸೊಸೈಟಿಯ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಸಂಸ್ಥೆಯ ನಿರ್ದೇಶಕರ ಕನಸಿನ ಕೂಸಾಗಿ ಬೆಳೆದು, ಆರೇ ವರ್ಷದಲ್ಲಿ ಉತ್ತಮ ಫಲಿತಾಂಶದೊಂದಿಗೆ ಸಾವಿರಾರು ವಿದ್ಯಾರ್ಥಿಗಳನ್ನು ಸಂಪನ್ಮೂಲ ವ್ಯಕ್ತಿಗಳನ್ನಾಗಿ ಕಾಣಿಕೆ ನೀಡಿದೆ ಎಂದರು.

ನಿರ್ದೇಶಕ ಪ್ರೊ. ಉಡುಪಿ ದೇಶಪಾಂಡೆ ಮಾತನಾಡಿ, ಇಂದು ಸಂಸ್ಥೆಯು ಸರ್ವ ಸದಸ್ಯರ ಒಗ್ಗಟ್ಟಿನ ಬಲದಿಂದ ಬೆಳೆಯುತ್ತಾ ಸಾಗುತ್ತಿರುವುದು ಸಂತೋಷದ ಸಂಗತಿಯಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಮಾತನಾಡಿ, ನಮ್ಮ



ಸಂಸ್ಥೆಯು ಅಲ್ಪ ವರ್ಷಗಳಲ್ಲಿ ಅಗಮ್ಯ ಸಾಧನೆಗಳನ್ನು ತನ್ನ ಮಡಿಲಿನಿಂದ ನಾಡಿಗೆ ನೀಡಿದೆ. ಪ್ರತಿಯೊಬ್ಬ ವಿದ್ಯಾರ್ಥಿಗಳು ಈ ಸಂಸ್ಥೆಯಿಂದ ಪಡೆದ ಶಿಕ್ಷಣ ಸದ್ಬಳಕೆಯಾಗಲೆಂದರು.

ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಮಾತನಾಡಿದರು. ಸಮಾರಂಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಂ.ಸಿ ಹಿರೇಮಠ ಉಪಸ್ಥಿತರಿದ್ದರು. ಪ್ರಮೀಳಾ ಚಿಕ್ಕನಗೌಡರ ಪ್ರಾರ್ಥನೆಗೈದರು. ಪ್ರೊ. ಹೆಚ್.ಎಸ್ ದಳವಾಯಿ ಸ್ವಾಗತಿಸಿದರು. ಪ್ರೊ. ವಿಜಯಲಕ್ಷ್ಮಿ ಲಕ್ಷ್ಮೇಶ್ವರ ಕಾರ್ಯಕ್ರಮ ನಿರೂಪಿಸಿದರು.

## ಹಿಂದೂ–ಮುಸ್ಲಿಂ ಭಾವೈಕ್ಯತೆ ಸಾರುವ ಕೊರಿಕೊಪ್ಪದ ಆಂಜನೇಯ
# ಈ ಹನುಮನಿಗೆ ಮುಸ್ಲಿಮರೇ ಪೂಜಾರಿ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

'ದೇವರೊಬ್ಬನೇ ನಾಮ ಹಲವು', 'ಎಲ್ಲ ಧರ್ಮಗಳ ಸಾರ ಒಂದೇ ಅದು ಮನುಷ್ಯ ಧರ್ಮ' ಎಂಬ ಮನೋಭಾವನೆಯಿಂದ ಇಂದಿಗೂ ಅನೇಕ ಕಡೆ ಜಾತಿ–ಧರ್ಮ ಬೇಧ ಮರೆತು ಸಹೋದರತೆಯಿಂದ ಬಾಳುತ್ತಾ ಬಂದಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಹಬ್ಬ–ಹರಿದಿನ, ಜಾತ್ರೆ, ಸಂಪ್ರದಾಯ–ಆಚರಣೆ ಸಂದರ್ಭದಲ್ಲಿ ಇದನ್ನು ಕಾಣಬಹುದಾಗಿದೆ.

ಇದಕ್ಕೆ ಲಕ್ಷ್ಮೇಶ್ವರದ ಸಮೀಪದ ಅಡರಕಟ್ಟಿ–ಕೊಂಡಿಕೊಪ್ಪ ಗ್ರಾಮದ ಹತ್ತಿರದ ಕೊರಿಕೊಪ್ಪ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ ಉತ್ತಮ ಉದಾಹರಣೆ. ವಿಶೇಷವಾಗಿ ಈ ದೇವಸ್ಥಾನಕ್ಕೆ ತಲೆಮಾರುಗಳಿಂದಲೂ ಮುಸ್ಲಿಂ–ಹಿಂದೂ ಬಾಂಧವರು ನಡೆದುಕೊಳ್ಳುತ್ತಿದ್ದು, ಇಲ್ಲಿಗೆ ಸುತ್ತಮುತ್ತಲಿನ ಗ್ರಾಮಗಳ



ಇದಕ್ಕೆ ಸಾಕ್ಷಿ ಎಂಬಂತೆ ಈ ಸ್ಥಳದಲ್ಲಿರುವ ಆಂಜನೇಯ, ದೇವಿ ದೇವಸ್ಥಾನ, ಇಲ್ಲಿನ ಜಮೀನುಗಳಲ್ಲಿ ಈಗಲೂ ಒಡೆದ ಮಣ್ಣಿನ ಮಡಕೆ, ಬೀಸುವ ಕಲ್ಲು, ಒಳ್ಳಕಲ್ಲು, ಧಾನ್ಯ ಸಂಗ್ರಹದ ಹಗೇವು ಪತ್ತೆಯಾಗುತ್ತವೆ. ಅಲ್ಲದೆ, ದೇವಸ್ಥಾನದ ಸುತ್ತ ನಿಧಿ ಸಿಗುತ್ತದೆಂಬ ಕಾರಣದಿಂದ ನಿಧಿ ಕಳ್ಳರು ಗುಂಡಿ ತೋಡಿರುವುದು, ಮೂರ್ತಿ ಧ್ವಂಸ, ವಾಮಾಚಾರ ಮಾಡುವ ಮೂಲಕ ನಿಧಿ ಆಸೆಗೆ ಈ ಸ್ಥಳದಲ್ಲಿ ಅನೇಕ ದೃಷ್ಕೃತ್ಯಗಳು ನಡೆಯುತ್ತಲೇ ಇವೆ.

ಸಾವಿರಾರು ಭಕ್ತರು ಆಗಮಿಸುತ್ತಾರೆ. ವಿಶೇಷವಾಗಿ, ಈ ದೇವಸ್ಥಾನಕ್ಕೆ ಹಿಂದೂ–ಮುಸ್ಲಿಂ ಬಾಂಧವರು ನಡೆದುಕೊಳ್ಳುತ್ತಾರೆ. ಅಷ್ಟೇ ಅಲ್ಲದೆ, ದೇವಸ್ಥಾನದ ಪೂಜೆಯನ್ನು ಮ.ಬಡ್ನಿ ಗ್ರಾಮದ ಮುಸ್ಲಿಂ ಕುಟುಂಬದವರೇ ಮಾಡುತ್ತಾ ಬಂದಿದ್ದಾರೆ. ಅದಕ್ಕಾಗಿ ಅವರಿಗೆ ದೇವಸ್ಥಾನಕ್ಕೆ ಹೊಂದಿಕೊಂಡಂತೆ ಜಮೀನೂ ಇದೆ.

ಕೊರಿಕೊಪ್ಪ ಆಂಜನೇಯ ದೇವಸ್ಥಾನ ನೂರಾರು ವರ್ಷಗಳ ಹಿನ್ನೆಲೆ ಹೊಂದಿದೆ. ದೇವಸ್ಥಾನವಿರುವ ಪ್ರದೇಶದಲ್ಲಿ ಹಿಂದೆ ಕೊನೇರಿಕೊಪ್ಪ, ಕೊರಿಕೊಪ್ಪ ಹಾಗೂ ಕೊಂಡಿಕೊಪ್ಪ ಎಂಬ ಗ್ರಾಮಗಳು ಇದ್ದವು. ಈ ಗ್ರಾಮಗಳಲ್ಲಿನ ಜನರು ಪ್ಲೇಗ್, ಸಿಡುಬು, ಕಾಲರಾಗಳಂತಹ ಸಾಂಕ್ರಾಮಿಕ ಕಾಯಿಲೆಗಳಿಂದ ಗ್ರಾಮಗಳನ್ನು ತೊರೆದು ಬೇರೆಡೆ ನೆಲೆ ನಿಂತರು.

ಆದರೆ ಸುತ್ತಲಿನ ನೂರಾರು ರೈತರಿಗೆ ಇಷ್ಟಾರ್ಥ ಸಿದ್ಧಿಸುವ ದೇವಸ್ಥಾನ ಇದಾಗಿದೆ. ಕೇವಲ ಕಲ್ಲಿನ ಗೂಡಿನಂತಿರುವ ದೇವಸ್ಥಾನವನ್ನು ಕೊಂಡಿಕೊಪ್ಪ, ಅಡರಕಟ್ಟಿ, ಮ.ಬಡ್ನಿ,ಲಕ್ಷ್ಮೇಶ್ವರ ಭಾಗದ ರೈತರೆಲ್ಲರ ಸಂಕಲ್ಪ–ಸಹಕಾರದಿಂದ ದೇವಸ್ಥಾನ ಜೀರ್ಣೋದ್ಧಾರ ಮಾಡಿದ್ದಾರೆ. ಶ್ರಾವಣ ಮಾಸದ 2ನೇ ಶನಿವಾರದ ದೇವಸ್ಥಾನದಲ್ಲಿ ಮೂಲ ಆಂಜನೇಯ ಮೂರ್ತಿಯ ಮರು ಪ್ರತಿಷ್ಠಾಪನೆ, ಹೋಮ–ಹವನ, ಅಭಿಷೇಕ, ಕುಂಕುಮಾರ್ಚನೆ, ಭಜನೆ ಸೇರಿದಂತೆ ವಿವಿಧ ಪೂಜಾ ಕಾರ್ಯಕ್ರಮ ನೆರವೇರಿಸಲಾಯಿತು. ಶ್ರದ್ಧಾ–ಭಕ್ತಿ, ನಂಬಿಕೆಯುಳ್ಳ ಅಪಾರ ಭಕ್ತರು ದರ್ಶನ ಪಡೆದರು.

ಈ ವೇಳೆ ರೈತರಾದ ಶಿವಪುತ್ರಯ್ಯ ಶಿಗ್ಲಿಮಠ, ರಾಮಣ್ಣ ಚಿಕ್ಕಣ್ಣವರ, ಶಿವಪ್ಪ ಜೈನ್, ರವಿ ನಾಯಕ, ಮೊಹಮ್ಮದ್ ಲಕ್ಷ್ಮೇಶ್ವರ, ಲಕ್ಷ್ಮಣ ಲಮಾಣಿ, ಬಸವರಾಜ ದೊಡಮನಿ, ಅಶೋಕ ಬನ್ನಿಮಟ್ಟಿ, ಜೀನೇಶ್ ಜೈನ್, ಮಂಜು ಲಮಾಣಿ ಸೇರಿ ಹಲವರಿದ್ದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
**E-mail: vijayasakshidaily@gmail.com**
**ಮೊ : 9019256545**

# ಲಕ್ಷ್ಮೇಶ್ವರ ಸಂಪೂರ್ಣ ಸ್ತಬ್ಧ...

▶▶ಮೊದಲನೇ ಪುಟದಿಂದ

ಪಟ್ಟಣದ ಹಳ್ಳದಕೇರಿ ಹನುಮಂತದೇವರ ದೇವಸ್ಥಾದ ಬಳಿ ಹಿರಿಯ ರೈತ ಮುಖಂಡರು ಹೋರಾಟಕ್ಕೆ ಚಾಲನೆ ನೀಡಿದರು. ರ್‍ಯಾಲಿಯು ತಹಸೀಲ್ದಾರ ಕಚೇರಿ ಎದುರು ಹಾಯ್ದು ದೂದಪೀರಾಂ ದರ್ಗಾ, ಹಾವಳಿ ಆಂಜನೇಯ ದೇವಸ್ಥಾನ, ಮುಖ್ಯ ಬಜಾರ್ ರಸ್ತೆ, ಶಿಗ್ಲಿ ನಾಕಾ ಮೂಲಕ ಸಾಗಿ, ಹೊಸ ಬಸ್ ನಿಲ್ದಾಣದ ಬಳಿ ರಾಜ್ಯಹೆದ್ದಾರಿಯ ಮೇಲೆ ಪ್ರತಿಭಟನೆ ನಡೆಸಿದರು. ರಾಜ್ಯಮಟ್ಟದ ರೈತ ಮುಖಂಡರು, ತಾಲೂಕಿನ ವಿವಿಧ ಗ್ರಾಮಗಳಿಂದ ಸಾವಿರಾರು ರೈತರು ಭಾಗವಹಿಸಿದ್ದರಿಂದ, ಬೃಹತ್ ಹೋರಾಟವಾಗಿ ರೂಪುಗೊಂಡಿತು.

ಹಿನ್ನೆಲೆಯಲ್ಲಿ ಸರಕಾರ ರೈತರ ನೋವಿಗೆ ಸ್ಪಂದಿಸುವದು ಅವಶ್ಯವಾಗಿದೆ. ಮಳೆಯ ಅಭಾವದಿಂದ ಒಣಗಿರುವ ಬೆಳೆಗೆ ಮಧ್ಯಂತರ ಬೆಳೆವಿಮೆ ಘೋಷಿಸುವದು, ರಾಷ್ಟ್ರೀಕೃತ ಬ್ಯಾಂಕ್ ಹಾಗೂ ಸಹಕಾರ ಸಂಘಗಳ ಬೆಳೆಸಾಲ ಸಂಪೂರ್ಣ ಮನ್ನಾ ಮಾಡುವುದು, ಬೆಳೆ ರಕ್ಷಿಸಿಕೊಳ್ಳಲು ತೋಟಗಳಿಗೆ ದಿನಕ್ಕೆ 7 ತಾಸು ವಿದ್ಯುತ್ ನೀಡುವುದ, ಬೆಳೆಸಾಲ ಪಡೆದ ರೈತರಿಗೆ ಬ್ಯಾಂಕುಗಳು ನೀಡುತ್ತಿರುವ ಕಿರುಕುಳ ತಪ್ಪಿಸುವುದು, ರಾಜ್ಯ ಸರಕಾರ ಕಿಸಾನ್ ಸಮ್ಮಾನ್ ಯೋಜನೆ ಜಾರಿಗೆ ತರುವುದು ಹೀಗೆ ಅನೇಕ ರೈತಪರ ಬೇಡಿಕೆಗಳನ್ನು ರಾಜ್ಯ ಸರಕಾರ ಕೂಡಲೇ ಈಡೇರಿಸುವಂತೆ ಮನವಿ ಮಾಡಿದರು.

ಸುಮಾರು 3 ತಾಸುಗಳ ಕಾಲ ರಸ್ತೆಯಲ್ಲೇ ಕುಳಿತ ರೈತರು ಅಲ್ಲಿಯೇ ಊಟ ಮಾಡಿದರು. ಹೋರಾಟದಲ್ಲಿ ಮನೋಹರ ಇನಾಮತಿ, ಭಾರತೀಯ ಕಿಸಾನ ಸಂಘದ ಉಪಾಧ್ಯಕ್ಷ ಬಸವರಾಜ ಅಸುಂಡಿ, ಕರ್ನಾಟಕ ಉತ್ತ ಪ್ರಾಂತ ಅಧ್ಯಕ್ಷ ವಿವೇಕ ಮೋರೆ, ತಾಲೂಕಾಧ್ಯಕ್ಷ ಚನ್ನಪ್ಪ ಷಣ್ಮುಖಿ, ಪದ್ಮರಾಜ ಪಾಟೀಲ, ಶಿವಾನಂದ ಲಿಂಗಶೆಟ್ಟಿ, ಬಸವರಾಜ ಹೊಗೆಸೊಪ್ಪಿನ, ಪ್ರಕಾಶ ಕೊಂಚಿಗೇರಿಮಠ, ಲೋಕೇಶ ಸುತಾರ, ಟಾಕಪ್ಪ ಸಾತಪೂತೆ, ಚಂಬಣ್ಣ ಬಾಳಿಕಾಯಿ, ಸುಜಾತಾ ದೊಡ್ಡಮನಿ, ಎಸ್.ಪಿ ಬಳಿಗಾರ, ರಾಮಣ್ಣ ಲಮಾಣಿ(ಶಿಗ್ಲಿ) ಅಶೋಕ ಲಮಾಣಿ, ಬಸವರಾಜ ಹಿರೇಮನಿ, ಚನ್ನಪ್ಪ ಜಗಲಿ, ಹನುಮಂತ ಚಿಂಚಲಿ, ಶಶಿಧರ ದುರ್ಗದ, ರವಿ ಲಿಂಗಶೆಟ್ಟಿ, ಚಂದ್ರಗೌಡ ಪಾಟೀಲ, ಎಸ್.ಪಿ ಪಾಟೀಲ, ಪಿಡ್ಡನಗೌಡ ಪಾಟೀಲ, ಬಾಪುಗೌಡ ಪಾಟೀಲ, ವಿಠ್ಠಲ್ ನಾಯಕ, ಡಿ.ಜೆ ಮುಚ್ಚಾಲೆ ಸೇರಿದಂತೆ ಅನೇಕರಿದ್ದರು.

ಸಚಿವ ಎಚ್.ಕೆ ಪಾಟೀಲ ಮತ್ತು ಅಧಿಕಾರಿಗಳ ತಂಡ ಸ್ಥಳಕ್ಕೆ ಆಗಮಿಸಿ ರೈತರ ಮನವಿ ಸ್ವೀಕರಿಸಿದರು.

**ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಮನೆ ಮನೆ ಸರ್ವೇ ಕಾರ್ಯದ ಪರಿಶೀಲನಾ ಸಭೆಯಲ್ಲಿ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ**

# ಮತದಾರರ ಪಟ್ಟಿಯಲ್ಲಿ ಲೋಪದೋಷಗಳಿಗೆ ಆಸ್ಪದ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಯಾವುದೇ ಲೋಪದೋಷಗಳಾಗದಂತೆ ಕ್ರಮ ವಹಿಸಬೇಕು ಎಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರದಂದು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಹಾಗೂ ಮನೆ ಮನೆ ಸರ್ವೇ ಕಾರ್ಯ ಕೈಗೊಂಡಿರುವ ಕುರಿತು ಜರುಗಿದ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಸಂಬಂಧಿಸಿದಂತೆ (ಬಿ.ಎಲ್.ಓ) ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ತಹಸೀಲ್ದಾರರು ಸಹ ಖುದ್ದಾಗಿ ಈ ಕುರಿತು ಪುನರ್ ಪರಿಶೀಲನೆ ನಡೆಸಬೇಕು. ಕಳೆದ ಬಾರಿ ಮತದಾನದ ಶೇಕಡ ಪ್ರಮಾಣ ಕಡಿಮೆಯಾಗಿರುವ ಮತಗಟ್ಟೆ ವ್ಯಾಪ್ತಿಯ ಪ್ರದೇಶದ ಪರಿಶೀಲನೆ ಮಾಡಿ ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

ಮತಗಟ್ಟೆಗಳ ಮುಂದೆ ಚುನಾವಣಾ ಸಹಾಯವಾಣಿ 1950 ಸಂಖ್ಯೆಯನ್ನು ಪ್ರದರ್ಶಿಸಬೇಕು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಯಾವುದೇ ಲೋಪದೋಷಗಳಾಗದಂತೆ ನೋಡಿಕೊಳ್ಳಬೇಕು ಮತ್ತು ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯ, ರಲ್ಯಾಂಪ್ ವ್ಯವಸ್ಥೆ, ಆಸನದ ವ್ಯವಸ್ಥೆ ಕುರಿತಂತೆ ಮತದಾನ ಮಾಡಲು ಅನುಕೂಲವಾಗುವ ವಾತಾವರಣ ಇರುವುದನ್ನು ಆಯಾ ತಹಸೀಲ್ದಾರರು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಶಾಲಾ ಕಾಲೇಜುಗಳಲ್ಲಿ ಯುವ ಮತದಾರರ ಹೆಸರು ಮತದಾರರ ಪಟ್ಟಿಗೆ ಸೇರ್ಪಡೆಗೆ ಹಾಗೂ ಮತದಾನದ ಮಹತ್ವದ ಕುರಿತಂತೆ ಬಿ.ಎಲ್.ಓಗಳು ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಬೇಕು ಹಾಗೂ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಸಲಹೆ ನೀಡಿದ ಅವರು ಹೋಟೆಲ್, ರೆಸ್ಟೋರೆಂಟ್, ಸಂಘ ಸಂಸ್ಥೆ, ಕಾರ್ಮಿಕರಲ್ಲಿಯೂ ಮತದಾನ ಜಾಗೃತಿ ಕಾರ್ಯಕ್ರಮ ಹಾಗೂ ಇ.ವಿ.ಎಂ. ಬಳಕೆ ಕುರಿತು ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ ಎಂದು ಹೇಳಿದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮಾತನಾಡಿ, ಜಿಲ್ಲೆಯಲ್ಲಿ 26-8-2023ಕ್ಕೆ ಕೊನೆಗೊಂಡಂತೆ 4,37,372 ಪುರುಷ ಮತದಾರರು, 4,35,595 ಮಹಿಳಾ ಮತದಾರರು, 61 ತೃತೀಯ ಲಿಂಗಿ ಮತದಾರರು ಸೇರಿದಂತೆ ಒಟ್ಟಾರೆ 8,73,028 ಮತದಾರರಿದ್ದಾರೆ. 23013 ಯುವ ಮತದಾರರು ಹಾಗೂ 11,398 ವಿಕಲಚೇತನ ಮತದಾರರಿದ್ದಾರೆ. ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಇದುವರೆಗೆ ಮನೆ ಮನೆ ಸರ್ವೇ ಕಾರ್ಯ ಕೈಗೊಂಡು 2,13,581 ಮನೆಗಳಿಗೆ ಭೇಟಿ ನೀಡಲಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ನಮೂನೆ ನಂ 6 ರಲ್ಲಿ 7501 ಅರ್ಜಿಗಳು ಸ್ವೀಕೃತವಾಗಿವೆ. ನಮೂನೆ 7ರಲ್ಲಿ 4072 ಅರ್ಜಿಗಳು, ನಮೂನೆ 8 ರಲ್ಲಿ 3552 ಅರ್ಜಿಗಳನ್ನು ಸಂಗ್ರಹಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯಕ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವರಾಜ ಮಲ್ಲೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ತಹಸೀಲ್ದಾರರು, ಬಿ.ಎಲ್.ಓಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಚುನಾವಣಾ ವಿಭಾಗದ ಸಿಬ್ಬಂದಿಗಳು ಹಾಜರಿದ್ದರು.

**ಗದಗ ಜಿಲ್ಲಾ ಶಿಕ್ಷಕರ ದಿನಾಚರಣೆ ಪೂರ್ವಬಾವಿ ಸಭೆಯಲ್ಲಿ ಡಿಸಿ ವೈಶಾಲಿ ಎಂ.ಎಲ್ ಸೂಚನೆ**

# ಶಿಕ್ಷಕರ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 5 ರಂದು ಗದಗ ಜಿಲ್ಲೆಯಲ್ಲಿ ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರದಂದು ಶಿಕ್ಷಕರ ದಿನಾಚರಣೆ ನಿಮಿತ್ತ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಿವೃತ್ತ ಶಿಕ್ಷಕ/ಶಿಕ್ಷಕಿಯರಿಗೆ ಸನ್ಮಾನ ಹಾಗೂ ಜಿಲ್ಲಾ ಉತ್ತಮ ಶಿಕ್ಷಕರಿಗೆ ಸನ್ಮಾನವನ್ನು ಈ ಸಂದರ್ಭದಲ್ಲಿ ಕೈಕೊಳ್ಳಬೇಕು ಎಂದು ಸಲಹೆ ನೀಡಿದರು.



ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಗವಿಸಿದ್ದೇಶ್ವರ ಶ್ರೀಗಳನ್ನು ಆಹ್ವಾನಿಸುವಂತೆ ಶಿಕ್ಷಣ ಸಂಘಟನೆಯ ಪದಾಧಿಕಾರಿಗಳು ವಿನಂತಿಸಿದರು. ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ.ರಡ್ಡೇರ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್.ಬುರಡಿ, ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ.ನಡುವಿನಮನಿ, ಶಿವಾನಂದ ಗಿಡ್ನಂದಿ, ಶಿಕ್ಷಕರ ಸಂಘಟನೆಯ ಪದಾಧಿಕಾರಿ ವಿ.ಎಂ.ಹಿರೇಮಠ, ಎಂ,ಕೆ.ಲಮಾಣಿ, ಕೆ.ಬಿ.ಕೊಣ್ಣೂರ, ಬಿ.ಎಫ್.ಪೂಜಾರ, ಎಂ.ಎಂ. ಯರಗುಡಿ, ಎಸ್.ಆರ್.ಬಂಡಿ, ಪಿ.ಬಿ.ಮುಧೋಳಮಠ, ವಿ.ಎಫ್. ಕಲಕಂಬಿ, ಎಸ್.ಬಿ.ದೊಡ್ಡಣ್ಣವರ, ಡಿ.ಎಸ್ ತಳವಾರ, ಎಸ್.ಸಿ. ನಾಗರಳ್ಳಿ, ಎನ್.ಎಚ್.ಪಾಟೀಲ ಹಾಗೂ ಎಸ್. ಕೆ.ಮಂಗಳಗುಡ್ಡ ಉಪಸ್ಥಿತರಿದ್ದರು.

# ಹಿಂದುಳಿದ ವರ್ಗಗಳ ಧ್ವನಿ ಡಿ.ದೇವರಾಜ ಅರಸು

▶▶ಮೊದಲನೇ ಪುಟದಿಂದ

ಬಣ್ಣಿಸಿದರು. ಹಿಂದುಳಿದ ವರ್ಗಗಳ ಧ್ವನಿಯಾಗಿ ನಿರಂತರ ಶ್ರಮಿಸಿದವರು ಡಿ.ದೇವರಾಜ ಅರಸು ಅವರು. ಇಂದು ಅನೇಕ ಹಿಂದುಳಿದ ವರ್ಗದ ಯುವ ಜನತೆ ಉನ್ನತ ಹುದ್ದೆ ಅಲಂಕರಿಸಲು ಡಿ.ದೇವರಾಜ ಅರಸು ಅವರ ಆಲೋಚನೆಗಳು ದಾರಿದೀಪವಾಗಿವೆ. ಅರಸುರವರ ಚಿಂತನೆ ಗದಗ ಜಿಲ್ಲೆಯ ಚಿಂತನೆಗೆ ಏನೂ ವ್ಯತ್ಯಾಸ ಇಲ್ಲ. ಇಲ್ಲಿ ನೆರದಿರುವ ವಿದ್ಯಾರ್ಥಿಗಳ ಹುಮ್ಮಸ್ಸು ನೋಡಿದರೆ, ನಾಳಿನ ಉಜ್ವಲ ಭವಿಷ್ಯ ಕಣ್ಣೆದುರು ಬರುತ್ತಿದೆ ಎಂದರು.

ವಸತಿ ನಿಲಯಗಳಲ್ಲಿ ಶಿಸ್ತು, ಸ್ವಚ್ಛತೆಗೆ ನಮ್ಮ ಜಿಲ್ಲೆ ಮಾದರಿಯಾಗಿದ್ದು, ಉತ್ತಮ ಊಟ ಒದಗಿಸುವದರ ಮೂಲಕ ದೈಹಿಕ ಸಾಮರ್ಥ್ಯ ವೃದ್ಧಿಗಾಗಿ ಸಹಕಾರಿಯಾಗಿದೆ ಎಂದ ಸಚಿವರು, ಜಿಲ್ಲೆಯಲ್ಲಿನ ವಸತಿ ನಿಲಯಗಳನ್ನು ವ್ಯವಸ್ಥಿತವಾಗಿ ಮುನ್ನೆಡುಸುತ್ತಿರುವ ಅಧಿಕಾರಿಗಳನ್ನು ಅಭಿನಂದಿಸಿದರು. ಇಂದು ಸರ್ಕಾರ ಜಾರಿಗೊಳಿಸಿರುವ ಯೋಜನೆಗಳಿಂದಾಗಿ ಬಡತನ ರೇಖೆಗಿಂತ ಕೆಳಗಿದ್ದವರ ಜಿವನದ ಗುಣಮಟ್ಟವನ್ನು ಉನ್ನತಿಗೇರಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರವಿ ಗುಂಜಿಕರ ಪ್ರಾಸ್ತಾವಿಕವಾಗಿ ಮಾತನಾಡಿ, ಹಿಂದುಳಿದ ಜನಾಂಗದವರಿಗೆ ಸಾಕಷ್ಟು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ. ಜಿಲ್ಲೆಯಲ್ಲಿ 62 ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. ವಸತಿ ನಿಲಯಗಳಲ್ಲಿ ಮನೆಯ ವಾತಾವರಣದೊಂದಿಗೆ, ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ. ಹಿಂದುಳಿದ ವರ್ಗದವರ ಕಲ್ಯಾಣಕ್ಕಾಗಿ ನಿಗಮಗಳ ಮೂಲಕ ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಗಳ ಜಾರಿಯಲ್ಲಿ ಜಿಲ್ಲೆ ಮುಂಚೂಣಿಯಲ್ಲಿದ್ದು, ವಸತಿ ನಿಲಯದ ವಿದ್ಯಾರ್ಥಿಗಳು ಶೈಕ್ಷಣಿಕ ವಲಯದಲ್ಲಿ ಉನ್ನತ ಸಾಧನೆ ಮಾಡುವಲ್ಲಿ ನಿಲಯ ಪಾಲಕರು, ಶಿಕ್ಷಕರು ಶ್ರಮ ವಹಿಸುವುದರ ಮೂಲಕ ಜಿಲ್ಲೆಯ ವಸತಿ ನಿಲಯಗಳನ್ನು ಮಾದರಿ ವಸತಿ ನಿಲಯಗಳನ್ನಾಗಿ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದರು.

ಪ್ರಾಧ್ಯಾಪಕ ಆರ್.ಎಚ್ ಜಂಗಣ್ಣವರ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರ ಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಮಾಜಿ ಶಾಸಕರಾದ ಎಸ್.ಜಿ ನಂಜಯ್ಯನಮಠ ಸೇರಿದಂತೆ, ಜನಪ್ರತಿನಿಧಿಗಳು, ಮುಖಂಡರು, ಗಣ್ಯರು, ಸಾರ್ವಜನಿಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಜೈ ಕಿಸಾನ್ ಕಲಾ ತಂಡದವರು ನಾಡಗೀತೆ ಪ್ರಚುರಪಡಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

# ಪರೀಕ್ಷೆ ಪಾರದರ್ಶಕವಾಗಿ ನಡೆಸಿ

▶▶ಮೊದಲನೇ ಪುಟದಿಂದ

ನಗರದಲ್ಲಿ ಒಟ್ಟು 19 ಪರೀಕ್ಷಾ ಕೇಂದ್ರಗಳಿದ್ದು, ಆಸನ ವ್ಯವಸ್ಥೆ ಹಾಗೂ ಕೇಂದ್ರದಲ್ಲಿ ಸಕಲ ವ್ಯವಸ್ಥೆಯನ್ನು ಮಾಡಲಾಗಿದೆ. ಪರೀಕ್ಷೆಯು ಎರಡು ಅವಧಿಗಳನ್ನು ಒಳಗೊಂಡಿದೆ. ಮೊದಲ ಅವಧಿಯಲ್ಲಿ 3844 ವಿದ್ಯಾರ್ಥಿಗಳಿದ್ದು ಎರಡನೆ ಅವಧಿಯಲ್ಲಿ 5004 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆಂದು ಸಭೆಗೆ ತಿಳಿಸಿದರು. ಸಭೆಯಲ್ಲಿ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್.ಬುರಡಿ, ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ.ನಡುವಿನಮನಿ, ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಹುರಳಿ, ಕೇಂದ್ರಗಳ ಮುಖ್ಯ ಅಧೀಕ್ಷಕರು, ಸ್ಥಾನಿಕ ಜಾಗೃತ ದಳದ ಅಧಿಕಾರಿಗಳು ಹಾಗೂ ಮಾರ್ಗಾಧಿಕಾರಿಗಳು ಉಪಸ್ಥಿತರಿದ್ದರು.

# ಬರಪೀಡಿತ ತಾಲೂಕು ಘೋಷಣೆಗೆ ಕೇಂದ್ರದ ಮಾನದಂಡ ಅಡ್ಡಿ

▶▶ಮೊದಲನೇ ಪುಟದಿಂದ

ಹಿನ್ನೆಲೆಯಲ್ಲಿ ಕೆಲ ತಾಲೂಕುಗಳನ್ನು ಬರ ಪ್ರದೇಶವೆಂದು ಘೋಷಣೆ ಮಾಡಲು ವಿಳಂಬವಾಗಿದೆ ಎಂದರು.

ನಿರಂತರ 7 ತಾಸು ತ್ರಿಫೇಸ್ ವಿದ್ಯುತ್ ಪೂರೈಕೆ ಮತ್ತು ಬ್ಯಾಂಕ್ ಅಧಿಕಾರಿಗಳು ರೈತರ ಸಾಲ ಮರುಪಾವತಿಗೆ ಒತ್ತಾಯ ಮಾಡುತ್ತಿರುವ ಕುರಿತು ನಾಳೆಯೇ ಅಧಿಕಾರಿಗಳ ಸಭೆ ಕರೆದು ನಿರ್ದೇಶನ ನೀಡುತ್ತೇನೆ.

ರೈತ ಸಂಘಟನೆಗಳ ಕೆಲ ಮುಖಂಡರಿಗೂ ಈ ಸಭೆಯಲ್ಲಿ ಭಾಗವಹಿಸಿ ಸಲಹೆ-ಸೂಚನೆ ನೀಡುವಂತೆ ಮನವಿ ಮಾಡುವದಾಗಿ ಹೇಳಿದರು. ರೈತರ ಇತರೆ ಮನವಿಗಳನ್ನು ಪರಿಶೀಲಿಸಿ ಆದಷ್ಟು ಶೀಘ್ರ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿ, ಕಾಂಗ್ರೆಸ್ ಸರ್ಕಾರ ಸದಾ ರೈತರೊಂದಿಗೆ ಇರುತ್ತದೆ ಎಂದರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ತಹಸೀಲ್ದಾರ ಕೆ.ಆನಂದಶೀಲ, ಡಿವೈಎಸ್‌ಪಿ ಎಂ.ಬಿ ಸಂಕದ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಕರಿಸಿದ್ದಪ್ಪ ಕೆ., ಮಾಜಿ ಶಾಸಕ ಜಿ.ಎಸ್ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಹೋರಾಟಗಾರರಾದ ಮಾಣಿಕಮ್ಮ ಚಿಲ್ಲೂರ, ಮಹೇಶ ಹೊಗೆಸೊಪ್ಪಿನ, ಸೋಮಶೇಖರ ಹಿರೇಮಠ, ತಾಮ್ರಗುಂಡಿ, ಎಸ್.ಪಿ ಪಾಟೀಲ, ಚನ್ನಪ್ಪ ಜಗಲಿ, ಚನ್ನಪ್ಪ ಷಣ್ಮುಖಿ, ಟಾಕಪ್ಪ ಸಾತಪೂತೆ, ಆನಂದ ಅಮರಶೆಟ್ಟಿ, ಖಾನಸಾಬ ಸೂರಣಗಿ, ಸೋಮಣ್ಣ ಬೆಟಗೇರಿ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್ಐ ಯೂಸೆಫ್ ಜಮೂಲಾ, ವ್ಹಿ.ಜಿ ಪವಾರ ಸೇರಿದಂತೆ ಅನೇಕರಿದ್ದರು.

# ಬೀಡನಾಳ ಗ್ರಾಮಕ್ಕೆ ಸಚಿವರ ಭೇಟಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಬೀಡನಾಳ ಗ್ರಾಮದಲ್ಲಿ ಕುರಿ ಮತ್ತು ಆಡುಗಳು ಏಕಾಏಕಿಯಾಗಿ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಸಚಿವ ಎಚ್. ಕೆ ಪಾಟೀಲ ಸೋಮವಾರ ಸಂಜೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಕುರಿಗಾಹಿಗಳು, ಪಶು ಇಲಾಖೆ ವೈದ್ಯಾಧಿಕಾರಿಗಳೊಂದಿಗೆ ಸಚಿವರು ಚರ್ಚಿಸಿ, ಸರ್ಕಾರದಿಂದ ಪ್ರತಿ ಕುರಿ, ಆಡಿಗೆ 5ಸಾವಿರ ರೂ. ಪರಿಹಾರ ನೀಡಲಾಗುತ್ತದೆ ಎಂದರು. ಹೆಚ್ಚುವರಿ ಪರಿಹಾರ ನೀಡಬೇಕು ಎಂದು ಕುರಿಗಾರರು ಮನವಿ ಮಾಡಿಕೊಂಡಾಗ, ಪ್ರಯತ್ನಿಸುವುದಾಗಿ ಸಚಿವರು ಭರವಸೆ ನೀಡಿದರು.



ಶಾಸಕ ಡಾ.ಚಂದ್ರು ಲಮಾಣಿ, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ತಹಸೀಲ್ದಾರ ಧನಂಜಯ್, ಬೀಡನಾಳ ಗ್ರಾ ಪಂ ಅಧ್ಯಕ್ಷ ಕೊಪ್ಪಣ್ಣ ಕೊಪ್ಪಣ್ಣವರ, ವೈ.ಎನ್ ಗೌಡರ, ಸುಜಾತಾ ದೊಡ್ಡಮನಿ, ವಾಸಣ್ಣ ಕುರಡಗಿ, ಡಿ.ಡಿ ಮೋರನಾಳ, ಹೇಮಗಿರೀಶ ಹಾವಿನಾಳ, ಹೇಮಂತಗೌಡ ಪಾಟೀಲ, ಲಿಂಗರಾಜಗೌಡ ಪಾಟೀಲ, ರುದ್ರಗೌಡ ಪಾಟೀಲ, ಶಿವಾನಂದ ಕರಕಣ್ಣವರ, ನಾಗರಾಜ ಹೊಂಬಳಗಟ್ಟಿ ಇತರರು ಇದ್ದರು.

**ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲರಿಂದ ಜಿಮ್ಸ್‌ಗೆ ಭೇಟಿ, ಪರಿಶೀಲನೆ**

# ರೋಗಿಗಳನ್ನು ವಿನಾಕಾರಣ ಅಲೆದಾಡಿಸಬೇಡಿ



450 ಹಾಸಿಗೆಗಳ ಹೊಸ ಕಟ್ಟಡ ಉತ್ತಮವಾಗಿ ನಿರ್ಮಾಣವಾಗಿದ್ದು, ಈ ಆಸ್ಪತ್ರೆ ಪೂರ್ಣಪ್ರಮಾಣದ ಚಿಕಿತ್ಸೆಯನ್ನು ರೋಗಿಗಳಿಗೆ ಇಲ್ಲಿ ಒದಗಿಸುವಂತಾಗಬೇಕು. ಅದಕ್ಕೆ ಅಗತ್ಯವಿರುವ ಎಲ್ಲ ರೀತಿಯ ಸಹಕಾರ ಒದಗಿಸಲಾಗುವದು ಎಂದು ಸಚಿವರು ಭರವಸೆ ನೀಡಿದರು. ಕಟ್ಟಡ ನಿರ್ವಹಣೆ ಉತ್ತಮ ರೀತಿಯಲ್ಲಿ ಆಗಬೇಕೆಂಬ ನೀರಿಕ್ಷೆ ಹೊಂದಲಾಗಿದ್ದು, ಈ ನಿಟ್ಟಿನಲ್ಲಿ ಆಡಳಿತ ವೈದ್ಯಾಧಿಕಾರಿಗಳು ಗಮನಹರಿಸಬೇಕು ಎಂದು ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖಾ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಭಾನುವಾರ ನಗರದ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಗರದ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಆಸ್ಪತ್ರೆಯಲ್ಲಿ ದಾಖಲಾಗಿರುವ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಚಿಕಿತ್ಸೆ ನೀಡುತ್ತಿರುವ ಕುರಿತು ಪರಿಶೀಲನೆ ನಡೆಸಿದರು. ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡುವಂತೆ ಸೂಚಿಸಿದರು. ಆಸ್ಪತ್ರೆಗೆ ನಿಯೋಜನೆಗೊಂಡ ವೈದ್ಯರು ಸಮಯಕ್ಕೆ ಸರಿಯಾಗಿ ಹಾಜರಾಗಿ, ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗುವ ಮಹಿಳೆಯರು ಮತ್ತು ಮಕ್ಕಳಿಗೆ ಉತ್ತಮ ಚಿಕಿತ್ಸೆ ಒದಗಿಸುವಂತೆ ತಿಳಿಸಿದರು.

ನಂತರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ಆಸ್ಪತ್ರೆಯಲ್ಲಿನ ಒಳರೋಗಿಗಳ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆಸ್ಪತ್ರೆಗೆ ದಾಖಲಾಗಿರುವ ರೋಗಿಗಳ ಬಗ್ಗೆ ಅಸಡ್ಡೆಯ ಭಾವನೆ ತೋರದೆ, ಉತ್ತಮ ಚಿಕಿತ್ಸೆ ನೀಡಲು ಪ್ರತಿಯೊಬ್ಬ ವೈದ್ಯರು ಮುಂದಾಗಬೇಕು. ಆಸ್ಪತ್ರೆಗೆ ಆಗಮಿಸುವ ರೋಗಿಗಳನ್ನು ವಿನಾಕಾರಣ ಅಲೆದಾಡಿಸುವ ಕಾರ್ಯ ಮಾಡದೇ, ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ ಗುಣಮಟ್ಟದ ಚಿಕಿತ್ಸೆಗೆ ಆದ್ಯತೆ ನೀಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರಚಿಕಿತ್ಸಕ ಕರಿಗೌಡರ, ಜಿಮ್ಸ್ ಹಣಕಾಸು ಅಧಿಕಾರಿ ಜೆ.ಸಿ ಪ್ರಶಾಂತ, ಮಾಜಿ ಶಾಸಕ ಡಿ.ಆರ್ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ ಸೇರಿದಂತೆ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕ್ಷೇತ್ರದ ಶಾಸಕರಾದ ನೀವು ರೈತರ ಧ್ವನಿಯಾಗಬೇಕು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೋಮವಾರ ಹಲವು ರೈತ ಸಂಘಟನೆ, ಕನ್ನಡಪರ ಸಂಘಟನೆಗಳು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಡೆಸಿದ ಪ್ರತಿಭಟನೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಬೆಂಬಲ ವ್ಯಕ್ತಪಡಿಸಲು ಪಾಲ್ಗೊಂಡರೂ ರೈತ-ರಿಂದ ವಿರೋಧ ಎದುರಿಸಬೇಕಾದ ಪರಿಸ್ಥಿತಿ ತಂದುಕೊಂಡು ಮುಜುಗರಕ್ಕೀಡಾದರು.

ಪ್ರತಿಭಟನೆಯ ಸ್ಥಳಕ್ಕೆ ಆಗಮಿಸಿದ ಶಾಸಕ ಡಾ.ಚಂದ್ರು ಲಮಾಣಿ, ತಮಗೆ ಬೇರೆಡೆ ಕಾರ್ಯಕ್ರಮಗಳಿವೆ, ತಮ್ಮ ಬೇಡಿಕೆಗಳ ಮನವಿ ನೀಡಿ, ಸರ್ಕಾರದ ಗಮನ ಸೆಳೆಯುವೆ ಎಂದರು. ಈ ವೇಳೆ ರೈತ ಮುಖಂಡರು ಈಗತಾನೇ ಬಂದೀರಿ, ಸಚಿವರೂ ಮನವಿ ಸ್ವೀಕರಿಸಲು ಬರಲಿದ್ದಾರೆ. ಈ ಕ್ಷೇತ್ರದ ಶಾಸಕರಾದ ನೀವು ರೈತರ ಧ್ವನಿಯಾಗಬೇಕು.

ನಮ್ಮೊಂದಿಗೆ ಕುಳಿತುಕೊಳ್ಳಿ ಎಂದು ಒತ್ತಾಯಿಸಿ ಕೆಳಗೆ ಕುಳಿಸಿದರು. ಕೆಲ ನಿಮಿಷ ಕುಳಿತ ಶಾಸಕರು ಫೋನಿನಲ್ಲಿ ಮಾತನಾಡುತ್ತಾ ಎದ್ದು ಹೋದರು. ಇದರಿಂದ ಅಸಾಮಾಧಾನಗೊಂಡ ಕೃಷಿಕ ಸಮಾಜದ ರಾಜ್ಯ ಮಹಿಳಾ ಅಧ್ಯಕ್ಷೆ ಮಾಣಿಕ್ಯ ಚಿಲ್ಲೂರ ಮತ್ತು ಪಕ್ಷಾತೀತ ರೈತಪರ ಹೋರಾಟ ವೇದಿಕೆ ತಾಲೂಕಾಧ್ಯಕ್ಷ ಮಹೇಶ ಹೊಗೆಸೊಪ್ಪಿನ, ಕ್ಷೇತ್ರದ ಶಾಸಕರಾಗಿ ಸರ್ಕಾರದ ಗಮನ ಸೆಳೆಯುವ ಮೂಲಕ ರೈತರ ಹಿತ ಕಾಪಾಡುವ ಜವಾಬ್ದಾರಿ ನಿಭಾಯಿಸಬೇಕಾದ ಶಾಸಕರು ರೈತರ ಹೋರಾಟಕ್ಕೆ ಅವಮಾನ ಮಾಡಿರುವುದು ರೈತರಿಗೆ ಬೇಸರ ತರಿಸಿದೆ. ಸಚಿವರು ಬರುವುದರೊಳಗೆ ವಾಪಸ್ ಬಂದು ರೈತರಲ್ಲಿ ಕ್ಷಮೆ ಕೇಳಿ, ಇಲ್ಲದಿದ್ದರೆ ರೈತರ ಪಾಲಿಗೆ ನೀವಿಲ್ಲ ಎಂದುಕೊಳ್ಳುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ ಪಾಟೀಲರು ಅಧಿಕಾರಿಗಳೊಂದಿಗೆ ಆಗಮಿಸಿ ಸಮಾಧಾನದಿಂದ ರೈತರ ಮನವಿ ಆಲಿಸಿ ತಮ್ಮಿಂದಾಗುವ ಬೇಡಿಕೆಗಳನ್ನು ಈಡೇರಿಸುತ್ತೇವೆ ಎಂದರು. ಶಾಸಕರು ಕೂಡ ಒಂದಷ್ಟು ಸೂಕ್ಷ್ಮತೆ ಅರಿತಿದ್ದರೆ ಸಮಾಧಾನದಿಂದ ಎಲ್ಲವನ್ನೂ ನಿಭಾಯಿಸಿ ರೈತರ ವಿಶ್ವಾಸಕ್ಕೆ ಪಾತ್ರವಾಗಬೇಕಿತ್ತು ಎಂಬ ಮಾತುಗಳು ಕೇಳಿಬಂದವು.

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಚಿವ ಎಚ್.ಕೆ ಪಾಟೀಲ

# ಸೆ.3ರಂದು ಟರ್ಫ್ ಹಾಕಿ ಕ್ರೀಡಾಂಗಣ ಲೋಕಾರ್ಪಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಹಾಕಿ ಕ್ರೀಡೆಯಲ್ಲಿ ಗದಗ ಜಿಲ್ಲೆ ತನ್ನದೇ ಆದ ಇತಿಹಾಸ ಹೊಂದಿದೆ. ಕಲ್ಕತ್ತಾ, ಮುಂಬೈ ಬಿಟ್ಟರೆ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಅತ್ಯುತ್ತಮ ಹಾಕಿ ಕ್ರೀಡಾಪಟುಗಳನ್ನು ನೀಡಿರುವ ಹೆಮ್ಮೆ ನಮ್ಮ ಗದಗ ಜಿಲ್ಲೆಯದಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ ಪಾಟೀಲ ಹೇಳಿದರು.

ಬೆಟಗೇರಿಯ ಗಾಂಧೀ ನಗರದಲ್ಲಿ ನಿರ್ಮಾಣವಾದ ಸುಸಜ್ಜಿತ ಹಾಕಿ ಕ್ರೀಡಾಂಗಣದಲ್ಲಿ ಸೋಮವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಗದಗ-ಬೆಟಗೇರಿ ನಗರದ ಹೃದಯ ಭಾಗದಲ್ಲಿ ಅಂದಾಜು 9 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾದ ಸುಸಜ್ಜಿತ ಟರ್ಫ್ ಹಾಕಿ ಕ್ರೀಡಾಂಗಣವು ಬರುವ ಸೆಪ್ಟೆಂಬರ 3ರಂದು ಮುಂಜಾನೆ 9 ಗಂಟೆಗೆ ಲೋಕಾರ್ಪಣೆಗೊಳ್ಳಲಿದೆ. ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಎಚ್.ಸಿ ಮಹದೇವಪ್ಪನವರು ಸುಸಜ್ಜಿತ ಹಾಕಿ ಕ್ರೀಡಾಂಗಣವನ್ನು ಉದ್ಘಾಟಿಸಲಿದ್ದು, ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವ ನಾಗೇಂದ್ರ ಆಗಮಿಸಲಿರುವರು ಎಂದರು.

ಅದೇ ದಿನ ಮುಂಜಾನೆ 10 ಗಂಟೆಗೆ ಹಾಕಿ ಕ್ರೀಡಾಂಗಣದಲ್ಲಿ ಆರು ತಂಡಗಳು ಎ ಮತ್ತು ಬಿ ಗುಂಪುಗಳಾಗಿ ವಿಂಗಡಿಸಿ ಹಾಕಿ ಪಂದ್ಯಾವಳಿಗಳನ್ನು ಆಯೋಜಿಸಲಾಗುತ್ತಿದೆ. ಮೊದಲ ಗುಂಪಿನಲ್ಲಿ ಕರ್ನಾಟಕ ರಾಜ್ಯ ಪೊಲೀಸ್, ಹುಬ್ಬಳ್ಳಿಯ ಹಾಕಿ ಅಕಾಡೆಮಿ, ಬಿವಾಯ್ಎಎಸ್ ತಂಡಗಳು ಹಾಗೂ ಮತ್ತೊಂದು ಗುಂಪಿನಲ್ಲಿ ಗದಗ-ಫೀಖ, ಎಸ್‌ಡಬ್ಲೂಆರ್ ಹುಬ್ಬಳ್ಳಿ ಹಾಗೂ ಬಿವಾಯ್ಎಎಸ್ ಬೆಂಗಳೂರು ತಂಡಗಳು ಸೆಣಸಲಿವೆ ಎಂದರು.

ಸುಸಜ್ಜಿತ ಹಾಕಿ ಕ್ರೀಡಾಂಗಣವು ಉತ್ತರ ಕರ್ನಾಟಕ ಭಾಗದಲ್ಲಿಯೇ ಪ್ರಥಮವಾಗಿದ್ದು, ಜಿಲ್ಲಾ ಮಟ್ಟದಲ್ಲಿ ಸುಸಜ್ಜಿತ ಟರ್ಫ್ ಹಾಕಿ ಕ್ರೀಡಾಂಗಣ ಹೊಂದಿರುವುದು ಗದಗ ಜಿಲ್ಲೆ ಮಾತ್ರ ಎಂಬುದು ಹೆಮ್ಮೆಯ ಸಂಗತಿಯಾಗಿದೆ. ಈ ಹಾಕಿ ಕ್ರಿಡಾಂಗಣದ ಉದ್ಘಾಟನಾ ಸಮಾರಂಭದಲ್ಲಿ ಯುವ ಕ್ರೀಡಾಪಟುಗಳನ್ನು ಹಾಗೂ ತರಬೇತುದಾರರನ್ನು ಸನ್ಮಾನಿಸಲಾಗುವದು. ಟರ್ಫ್ ಹಾಕಿ ಕ್ರೀಡಾಂಗಣ ನಿರ್ಮಿಸಲು ಅಗತ್ಯ ಸಹಕಾರ ನೀಡಿದ ಐವರನ್ನು ಗೌರವಿಸಿ ಸನ್ಮಾನಿಸಲಾಗುವದು. ಅದೇ ದಿನ ಕಳಸಾಪುರ ರಸ್ತೆಯಲ್ಲಿನ ಒಳಾಂಗಣ ಕ್ರೀಡಾಂಗಣದ ಹಿಂದುಗಡೆ ನಿರ್ಮಾಣಗೊಂಡಿರುವ ಹೊಸ ಈಜುಕೊಳ ಕೂಡ ಮಧ್ಯಾಹ್ನ 12 ಗಂಟೆಗೆ ಸಚಿವ ನಾಗೇಂದ್ರ ಅವರು ಲೋಕಾರ್ಪಣೆಗೊಳಿಸುವರು ಎಂದು ಸಚಿವರು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಲೋಕಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಶಿರೋಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು, ಹಾಕಿ ತರಬೇತಿದಾರರು, ಕ್ರೀಡಾಪಟುಗಳು ಉಪಸ್ಥಿತರಿದ್ದರು.



### ಕ್ರೀಡಾ ಕೌಶಲ್ಯ ಪ್ರದರ್ಶಿಸಿದ ಸಚಿವ ಎಚ್.ಕೆ ಪಾಟೀಲ

ಸುಸಜ್ಜಿತ ಟರ್ಫ ಹಾಕಿ ಕ್ರೀಡಾಂಗಣಕ್ಕೆ ಸಚಿವ ಡಾ. ಎಚ್.ಕೆ ಪಾಟೀಲ ಭೇಟಿ ನೀಡಿ ಪರಿಶೀಲಿಸಿದ ಸಂದರ್ಭದಲ್ಲಿ, ಹಾಕಿ ಕ್ರೀಡಾಪಟುಗಳು ತಮ್ಮ ಕೌಶಲ್ಯವನ್ನು ಸಚಿವರಿಗೆ ಪ್ರದರ್ಶಿಸಿದರು. ಸಚಿವ ಎಚ್.ಕೆ ಪಾಟೀಲ ಅವರು ಹಾಕಿ ಕ್ರೀಡಾಪಟುಗಳಿಗೆ ಕಮ್ಮಿ ಇಲ್ಲದಂತೆ ತಮ್ಮಲ್ಲಿ ಅಡಗಿರುವ ಹಾಕಿ ಕೌಶಲ್ಯವನ್ನು ಪ್ರದರ್ಶಿಸಿದರು. ಗುರಿ ಸಾಧನೆಗೆ ಮರಳಿ ಪ್ರಯತ್ನ ಮಾಡು ಎನ್ನುವಂತೆ ಸಚಿವರು ಚೆಂಡನ್ನು ನಿಖರವಾಗಿ ಬಾರಿಸುವ ಮೂಲಕ ಗೋಲು ಹೊಡೆದಿದ್ದು ಮೈದಾನದಲ್ಲಿ ನೆರೆದ ಕ್ರೀಡಾಪಟುಗಳನ್ನು ರೋಮಾಂಚನಗೊಳಿಸಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಲೋಕಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಶಿರೋಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಕ್ರೀಡಾಪಟುಗಳಿಗೆ ಹಾಕಿ ಕಿಟ್‌ನ್ನು ಸಚಿವ ಎಚ್.ಕೆ ಪಾಟೀಲ ವಿತರಿಸಿದರು.

---

### ನುಲಿಯ ಚಂದಯ್ಯ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ತೀರ್ಮಾನ

## ನುಲಿಯ ಚಂದಯ್ಯ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ಧತೆ



■ ವಿಜಯಸಾಕ್ಷಿ ಸುದ್ದಿ, ಗದಗ

ನುಲಿಯ ಚಂದಯ್ಯ ಜಯಂತಿಯನ್ನು ಆಗಸ್ಟ್ 31 ರಂದು ಬೆ.11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರದಂದು ನುಲಿಯ ಚಂದಯ್ಯ ಜಯಂತಿ ಆಚರಿಸುವ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಯಕ ಯೋಗಿ ಬಸವಣ್ಣವರ ಸಮಕಾಲೀನರಾದ ನುಲಿಯ ಚಂದಯ್ಯನವರು ಪ್ರಮುಖ ಶರಣರಲ್ಲಿ ಒಬ್ಬರಾಗಿದ್ದು, ತಮ್ಮ ವಚನಗಳ ಮೂಲಕ ಸಮಾಜ ತಿದ್ದುವ ಕಾರ್ಯ ಮಾಡಿದ್ದಾರೆ. ನುಲಿಯ ಚಂದಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ತಾಲೂಕು ಮಟ್ಟದಲ್ಲಿಯೂ ಆಚರಿಸಲಾಗುವುದು. ಶಿಷ್ಟಾಚಾರದನ್ವಯ ಜಯಂತಿ ಕಾರ್ಯಕ್ರಮದ ಆಮಂತ್ರಣ ಮುದ್ರಣಕ್ಕೆ ಕ್ರಮ ವಹಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಕಾರ್ಯಕ್ರಮದ ವೇದಿಕೆ ವ್ಯವಸ್ಥೆ, ಬ್ಯಾನರ್ ಅಳವಡಿಕೆ, ಉಪನ್ಯಾಸಕರ ನೇಮಕ ಕುರಿತು ಚರ್ಚಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು. ಸಭೆಯಲ್ಲಿ ಸುರೇಶ ಕಟ್ಟಿಮನಿ, ಪ್ರೊ. ಕೆ.ಎಚ್.ಬೇಲೂರು, ಹುಲ್ಲೇಶ ಭಜಂತ್ರಿ, ರಾಮು ಭಜಂತ್ರಿ, ಮೋಹನ ಭಜಂತ್ರಿ, ಬಸವರಾಜ್ ಭಜಂತ್ರಿ, ಪರಶುರಾಮ ಕಟ್ಟಿಮನಿ, ಮೋಹನ ಕಟ್ಟಿಮನಿ, ಪರಶುರಾಮ ಗೋಕಾವಿ, ಪರಶುರಾಮ ಗಡಾದ, ಅಶೋಕ ಕಟ್ಟಿಮನಿ, ಎಚ್.ವಿ. ವೀರಾಪುರ, ವೈ.ಜಿ.ಗಡಾದ, ಭೀಮಸಿಂಗ್ ಕೊರವರ, ಸೇರಿದಂತೆ ಸಮುದಾಯದ ಗಣ್ಯರು, ಹಿರಿಯರು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

---

## ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಪ್ರವಾಸ


■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಆ.29 ರ ಪ್ರವಾಸ ವಿವರ ಇಂತಿದೆ.

ಮುಂಜಾನೆ 10.30 ಗಂಟೆಗೆ ನಗರದ ಕಳಸಾಪೂರ ರಸ್ತೆಯಲ್ಲಿನ ಒಳಾಂಗಣ ಕ್ರೀಡಾಂಗಣ ಹಿಂಬಾಗ ನಿರ್ಮಾಣವಾದ ಈಜುಗೊಳವನ್ನು ವಿಕ್ಷಣೆ ಮಾಡುವರು.

ಮುಂಜಾನೆ 11 ಗಂಟೆಗೆ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮೇಜರ್ ದ್ಯಾನಚಂದ ಅವರ ಜನ್ಮದಿನಾಚರಣೆ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸುವರು.

ಮುಂಜಾನೆ 11.30 ಗಂಟೆಗೆ ಬೆಟಗೇರಿ ಹುಯಿಲಗೋಳ ರಸ್ತೆಯ ಬಾಲಾಜಿ ಕಲ್ಯಾಣ ಮಂಟಪದ ಹತ್ತಿರ ಇರುವ ಸರ್ಕಾರಿ ಹಿರಿಯ ಹೆಣ್ಣು ಮಕ್ಕಳ ಶಾಲೆ ನಂ.3 ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.



ಮುಂಜಾನೆ 11.45 ಗಂಟೆಗೆ ಬೆಟಗೇರಿ ವಾರ್ಡ್ ನಂ.4 ರ ಮಂಜುನಾಥ ನಗರದ ಸರ್ಕಾರಿ ಕಿರಿಯ ಹೆಣ್ಣು ಮಕ್ಕಳ ಶಾಲೆ ನಂ.4 ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕರೊಂದಿಗೆ ಸಭೆ ನಡೆಸಿ, ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

---

## ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಪ್ರೊ.ಸಿ.ವಿ ಕೆರಿಮನಿ ಇನ್ನಿಲ್ಲ

**ಲಕ್ಷ್ಮೇಶ್ವರ:** ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಪ್ರೊ. ಸಿ.ವಿ ಕೆರಿಮನಿ ತಮ್ಮ 84 ವಯಸ್ಸಿನಲ್ಲಿ ಇಹಲೋಕ ತ್ಯಜಿಸಿದ್ದು, ಪುಲಿಗೆರೆಯ ಸಾಹಿತ್ಯ ಕ್ಷೇತ್ರ ಬಡವಾಗಿದೆ. ಸಿವಿಕೆ ಅವರು ಪತ್ನಿ, ಮೂವರು ಪುತ್ರಿಯರು, ಪುತ್ರ ಸೇರಿ ಅಪಾರ ಬಂಧುಗಳು, ಸಾಹಿತ್ಯಾಭಿಮಾನಿ ಬಳಗವನ್ನು ಅಗಲಿದ್ದಾರೆ.



ಇಳಿ ವಯಸ್ಸಿನಲ್ಲಿಯೂ ಸಾಹಿತ್ಯಿಕ, ಸಾಂಸ್ಕೃತಿಕ, ಧಾರ್ಮಿಕ, ಸಾಮಾಜಿಕ ಕ್ಷೇತ್ರದ ಸೇವೆಯಲ್ಲಿ ತೊಡಗಿಸಿಕೊಂಡು ದಣಿವರಿಯದ ಕನ್ನಡ ಕಾಯಕಯೋಗಿದ್ದ ಸಿವಿಕೆ, ಪುಲಿಗೆರೆ ಸಾಂಸ್ಕೃತಿಕ ಲೋಕದ ರಾಯಭಾರಿಯಂತಿದ್ದರು. ಮೂಲತಃ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಮೊರಬ ಗ್ರಾಮದವರು. ಲಕ್ಷ್ಮೇಶ್ವರದ ಪುರಸಭಾ ಕಾಲೇಜಿನ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಉಪನ್ಯಾಸಕರಾಗಿ, ಭಾಷೆಯ ಜ್ಞಾನ-ಅಭಿಮಾನ ಮೊಳಗಿಸಿದರು.

ಹಂಪಿ ಕನ್ನಡ ವಿ.ವಿ. ಆಡಳಿತ ಸದಸ್ಯರಾಗಿ, ಕರ್ನಾಟಕ ವಿಶ್ವವಿದ್ಯಾಲಯದ ಕಾಲೇಜು ಶಿಕ್ಷಕ ಸಂಘದ ಉಪಾಧ್ಯಕ್ಷರಾಗಿ, ಕರ್ನಾಟಕ ವಿಶ್ವವಿದ್ಯಾಲಯದ ಅಕಾಡೆಮಿಕ್ ಕೌನ್ಸಿಲ್ ಸದಸ್ಯರಾಗಿ, ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯರಾಗಿ, ಅಭ್ಯಾಸ ಮಂಡಳಿ ಸದಸ್ಯರಾಗಿ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸಲ್ಲಿಸಿದ ಸೇವೆ ಅನನ್ಯ.

ಗದಗ ಜಿಲ್ಲೆಯ ಮಾಹಿತಿಯನ್ನು ನೀಡುವ ಹಲವಾರು ಅರ್ಥಪೂರ್ಣ ಕೃತಿಗಳನ್ನು ಸಂಪಾದಿಸಿ, ಗದಗ ಜಿಲ್ಲೆಯ ಜನರಿಗೆ ಮಹದುಪಕಾರಗೈದಿದ್ದಾರೆ.

ಇತ್ತೀಚಿಗೆ ಪ್ರಕಟಗೊಂಡ 'ಗದಗ ಜಿಲ್ಲೆ ಒಂದು ಅಧ್ಯಯನ' ಕೃತಿ ಗದಗ ಜಿಲ್ಲೆಯ ಸಮಗ್ರ ಮಾಹಿತಿಯನ್ನು ನೀಡುವ ಪ್ರಮುಖ ಆಕರ ಗ್ರಂಥವಾಗಿ ಹೊರಹೊಮ್ಮಿದೆ. ಎರಡು ಅವಧಿಗೆ ಲಕ್ಷ್ಮೇಶ್ವರ ರೋಟರಿ ಕ್ಲಬ್ ಅಧ್ಯಕ್ಷರಾಗಿ ಸಾಮಾಜಿಕ ಕಾರ್ಯಗಳನ್ನು ನೆರವೇರಿಸಿದ್ದರು. 1999ರಲ್ಲಿ ಸಿಂಗಾಪೂರದಲ್ಲಿ ಜರುಗಿದ ಜಾಗತಿಕ ರೋಟರಿ ಸಮಾವೇಶದಲ್ಲಿ ಪಾಲ್ಗೊಂಡಿದ್ದು, ರಾಷ್ಟ್ರೀಯ ಸಾಕ್ಷರತಾ ಆಂದೋಲನದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿದ್ದಾರೆ.

ಪ್ರೊ.ಸಿ.ವಿ.ಕೆರಿಮನಿಯವರ ಸಾಧನೆಗೆ ಶರೀಫ ಪ್ರಶಸ್ತಿ, ಉತ್ತಮ ಎನ್‌ಎಸ್ ಅಧಿಕಾರಿ, ರಾಜ್ಯಮಟ್ಟದ ಮನುಕುಲ ಪ್ರಶಸ್ತಿಗಳೊಂದಿಗೆ, 2012ನೇ ಸಾಲಿನ ಕರ್ನಾಟಕ ಸರಕಾರದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೂ ಭಾಜನರಾಗಿದ್ದರು.

ಮೃತರ ಅಂತ್ಯಕ್ರಿಯೆ ಆ 29ರ ಮಂಗಳವಾರ ಮಧ್ಯಾಹ್ನ ಲಕ್ಷ್ಮೇಶ್ವರದಲ್ಲಿ ನೆರವೇರಲಿದೆ.

**ಸಂತಾಪ:** ಸಿವಿಕೆ ಅವರ ನಿಧನಕ್ಕೆ ನಾಡಿನ ವಿವಿಧ ಮಠಾಧೀಶರು, ಸಾಹಿತಿಗಳು, ರಾಜಕಾರಣಿಗಳು, ಗಣ್ಯರು ಸಂತಾಪ ಸೂಚಿಸಿದ್ದಾರೆ.

---

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2023-24ನೇ ಸಾಲಿಗೆ ಮತಿಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧರು, ಸಿಖ್ಖರು, ಫಾರ್ಸಿಗಳು ಮತ್ತು ಆಂಗ್ಲೊ ಇಂಡಿಯನ್ ಸಮುದಾಯದವರಿಗೆ ಅರಿವು ಸಾಲ ಯೋಜನೆ, ಶ್ರಮಶಕ್ತಿ ಸಾಲ ಯೋಜನೆ, ಶ್ರಮಶಕ್ತಿ ವಿಶೇಷ ಮಹಿಳಾ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಗಂಗಾ ಕಲ್ಯಾಣ ಯೋಜನೆ, ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣಕ್ಕಾಗಿ ಬಡ್ಡಿ ರಹಿತ ಸಾಲ ಯೋಜನೆ, ಸಮುದಾಯ ಆಧಾರಿತ ತರಬೇತಿ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರುವ, 18 ರಿಂದ 55 ವರ್ಷ ವಯೋಮಿತಿವುಳ್ಳ ಆಸಕ್ತರಿಂದ ಯೋಜನೆಗಳಿಗೆ ಸಾಲ ಸೌಲಭ್ಯ ಒದಗಿಸಲು ನಿಗಮದ ಅಂತರಜಾಲ https://kmdconline.karnataka.gov.in ದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೌಕರರ ಕುಟುಂಬದ ಸದಸ್ಯರು ಅರಿವು ಸಾಲ ಯೋಜನೆಯನ್ನು ಹೊರತುಪಡಿಸಿ ಇನ್ನುಳಿದ ಯೋಜನೆಗಳಿಗೆ ಅರ್ಹರಾಗಿರುವುದಿಲ್ಲ.

ಜಿಲ್ಲೆಯ ಅರ್ಹ ಅಲ್ಪಸಂಖ್ಯಾತರು ಮೇಲ್ಕಂಡ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿದ ಕೂಡಲೆ ಅರ್ಜಿಯನ್ನು ಪ್ರಿಂಟ್‌ಔಟ್ ಪಡೆದು ಕ್ಯೂಆರ್‌ಕೋಡ್ ಹೊಂದಿದ ಅರ್ಜಿಯೊಂದಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿಯಮಿತ ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ 1ನೇ ಮಹಡಿ ಜಿಲ್ಲಾ ನ್ಯಾಯಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಜಿಲ್ಲೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08372-295147 ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿಯಮಿತ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲರಿಂದ ಮಾಹಿತಿ

# ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆಗೆ ನಾಳೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರದಲ್ಲಿಯೇ ಅಚ್ಚರಿ ಮೂಡಿಸಿದ, ಹೆಣ್ಣು ಮಕ್ಕಳಿಗೆ ಸಮಾಜದಲ್ಲಿ ಆರ್ಥಿಕ ಸ್ವಾವಲಂಬನೆ ತರುವ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆಗೆ ಆಗಸ್ಟ 30ರಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಮೈಸೂರಿನಲ್ಲಿ ಚಾಲನೆ ನೀಡಲಿದ್ದಾರೆ. ಅದೇ ದಿನ ಗದಗ ನಗರದ ಪಂ.ಭೀಮಸೇನ್ ಜೋಶಿ ಜಿಲ್ಲಾ ರಂಗಮಂದಿರದಲ್ಲಿ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆಗೆ ಜಿಲ್ಲಾ ಮಟ್ಟದಲ್ಲಿ ಮಧ್ಯಾಹ್ನ 12 ಗಂಟೆಗೆ ಚಾಲನೆ ನೀಡಲಾಗುವದು ಎಂದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲ ತಿಳಿಸಿದರು.

ಬೆಟಗೇರಿಯ ಗಾಂಧೀ ನಗರದ ಸುಸಜ್ಜಿತ ಹಾಕಿ ಕ್ರೀಡಾಂಗಣದಲ್ಲಿ ಸೋಮವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಈಗಾಗಲೇ ಗೃಹಲಕ್ಷ್ಮೀ ಯೋಜನೆಯಡಿ ಜಿಲ್ಲೆಯಲ್ಲಿ 2,14,923 ಫಲಾನುಭವಿಗಳು ನೋಂದಣಿ ಮಾಡಿಕೊಂಡಿರೆ. ಅಂದಾಜು 12 ಸಾವಿರ ಫಲಾನುಭವಿಗಳ ನೋಂದಣಿ ಕಾರ್ಯವು ತಾಂತ್ರಿಕ ಕಾರಣಗಳಿಂದಾಗಿ ವಿಳಂಬವಾಗಿದೆ. ಇವುಗಳ ನೋಂದಣಿಗೂ ಕ್ರಮ ವಹಿಸಲು ಸೂಚಿಸಲಾಗಿದೆ. ಸರ್ಕಾರದ ಈ ಮಹಾತ್ವಾಕಾಂಕ್ಷೆ ಯೋಜನೆ ಜಾರಿಯಿಂದಾಗಿ ಬಡತನ ರೇಖೆ-ಗಿಂತ ಕೆಳಗಿರುವ ಕುಟುಂಬಗಳು ಸ್ವಾಭಿಮಾನದ ಜೀವನ ನಡೆಸಲು ಮುನ್ನುಡಿ ದೊರಕಿದಂತಾಗುತ್ತದೆ. ಬಡ ಕುಟುಂಬಗಳ ಆರ್ಥಿಕ ಅಡಚಣೆ ನಿವಾರಣೆಗೆ ಉಪಯುಕ್ತವಾಗಿದ್ದು, ಈ ಯೋಜನೆ ಮೂಲಕ ರಾಜ್ಯದಲ್ಲಿ ಕ್ರಾಂತಿಕಾರಕ ಬದಲಾವಣೆ ಆಗಲಿದೆ ಎಂದರು.

ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದಾಗಿ ಕುಟುಂಬಗಳಿಗೆ ವಾರ್ಷಿಕ 50-60 ಸಾವಿರ ಆರ್ಥಿಕ ಸಹಾಯ ದೊರೆಯುತ್ತದೆ. ರಾಜ್ಯ ಸರ್ಕಾರದ ಗ್ಯಾರಂಟಿಗಳ ಅನುಷ್ಠಾನದಿಂದ ರಾಜ್ಯದ 1.4 ಕೋಟಿ ಕುಟುಂಬಗಳು ಬಡತನ ರೇಖೆಗಿಂತ ಮೇಲೆ ಬರಲಿವೆ. ಇದೊಂದು ಕ್ರಾಂತಿಕಾರಕ ಬೆಳವಣಿಗೆಯಾಗಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಗರೀಬಿ ಹಟಾವೋ ಆಗಲಿದೆ ಎಂದು ಸಚಿವ ಎಚ್.ಕೆ ಪಾಟೀಲ ನುಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಪಿ.ವಾಯ್ ಶೆಟ್ಟೆಪ್ಪನವರ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

> ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ನುಡಿದಂತೆ ನಡೆಯುವ ಮೂಲಕ ನೂರು ದಿನ ಯಶಸ್ವಿಯಾಗಿ ಪೂರೈಸಿದೆ. ಮಹಿಳಾ ಸಬಲೀಕರಣಕ್ಕಾಗಿ ಶಕ್ತಿ ಯೋಜನೆ ಜಾರಿಗೊಳಿಸಿದಾಗಿನಿಂದ 40 ಕೋಟಿ ಮಹಿಳಾ ಫಲಾನುಭವಿಗಳು ಯೋಜನೆಯ ಲಾಭ ಪಡೆದಿದ್ದಾರೆ. ಇದು ದೇಶದಲ್ಲಿಯೇ ಕ್ರಾಂತಿಕಾರಕ ಬದಲಾವಣೆಯಾಗಿದೆ. ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ ಶೇ.93ರಷ್ಟು, ಅನ್ನಭಾಗ್ಯ ಯೋಜನೆಯಡಿ ಶೇ.98ರಷ್ಟು ಗುರಿ ಸಾಧನೆಯಾಗಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆ ಮುಂಚೂಣಿಯಲ್ಲಿದೆ. ಇದಕ್ಕಾಗಿ ಜಿಲ್ಲಾಡಳಿತ ಹಾಗೂ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ.
>
> **– ಎಚ್.ಕೆ ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka